ಸಂಪುಟ : 11 ಸಂಚಿಕೆ: 108 ಪುಟ : 4+2 ಬೆಲೆ: 3.00 ಶನಿವಾರ ಮೇ 30 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 108 Pages : 4+2 Price : 3.00 Saturday May 30 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ನಾಳೆ ತರುಣ ಸಂಘದ ವಾರ್ಷಿಕ ಸಭೆ

■ವಿಜಯಸಾಕ್ಷಿ ಸುದ್ದಿ, ಬೆಟಗೇರಿ

ಶ್ರೀ ಸೋ.ಸ. ಕ್ಷತ್ರೀಯ ತರುಣ ಸಂಘ, ಶ್ರೀ ಜಗದಂಬಾ ದೇವಸ್ಥಾನ ಬೆಟಗೇರಿ ಇದರ ವಾರ್ಷಿಕ ಸರ್ವ ಸಾಧಾರಣ ಸಭೆಯು ಮೇ 31ರಂದು ರವಿವಾರ ಮುಂಜಾನೆ 11 ಗಂಟೆಗೆ ಅಂಬಾಭವಾನಿ ದೇವಸ್ಥಾನದಲ್ಲಿ ಜರುಗಲಿದೆ.

ಸಂಘದ ಅಧ್ಯಕ್ಷ ನಾರಾಯಣಸಾ ಕಬಾಡಿ ಅವರ ಅಧ್ಯಕ್ಷತೆಯಲ್ಲಿ ನಡೆಯಲಿರುವ ಸಭೆಯಲ್ಲಿ 2025–26ನೇ ಸಾಲಿನ ಲೆಕ್ಕಪತ್ರಗಳ ಪರಿಶೀಲನೆ ಹಾಗೂ ಮುಂದಿನ ಅವಧಿಗೆ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಲಿದೆ.

ಸಮಾಜದ ಎಲ್ಲ ತರುಣರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು. ತರುಣ ಸಂಘದ ಎಲ್ಲ ಪದಾಧಿಕಾರಿಗಳು ಹಾಗೂ ಸದಸ್ಯರು ಸಮಯಕ್ಕೆ ಸರಿಯಾಗಿ ಹಾಜರಾಗುವಂತೆ ಸಂಘದ ಗೌರವ ಕಾರ್ಯದರ್ಶಿ ಸೋಮಶೇಖರ ಮೇರವಾಡೆ ಪ್ರಕಟಣೆಯಲ್ಲಿ ಮನವಿ ಮಾಡಿದ್ದಾರೆ.

## ಮಳೆಯ ಅವಾಂತರಕ್ಕೆ ಆಟೋ ಚಾಲಕ ಬಲಿ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದಲ್ಲಿ ಶುಕ್ರವಾರ ಸುರಿದ ಭಾರೀ ಮಳೆಗೆ ಆಟೋ ಚಾಲಕನೊಬ್ಬ ಬಲಿಯಾದ ಘಟನೆ ವಿಜಯನಗರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.

ಭಾರೀ ಮಳೆಯಿಂದ ಕ್ಲಬ್‌ನ ಕಾಂಪೌಂಡ್ ಕುಸಿದು ಆಟೋ ಮೇಲೆ ಬಿದ್ದ ಪರಿಣಾಮ ಗಂಗೊಂಡನಹಳ್ಳಿ ನಿವಾಸಿ ಶಿವಬೋರಯ್ಯ (56) ಸ್ಥಳದಲ್ಲೇ ಮೃತಪಟ್ಟಿದ್ದಾರೆ.

ಘಟನೆಯ ಬಳಿಕ ಮೃತದೇಹವನ್ನು ವಿಕ್ಟೋರಿಯಾ ಆಸ್ಪತ್ರೆಗೆ ಸ್ಥಳಾಂತರಿಸಲಾಗಿದೆ. ಸ್ಥಳಕ್ಕೆ ವಿಜಯನಗರ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ನಗರದಲ್ಲಿ ಸಂಜೆ ವೇಳೆಯೂ ಮಳೆ ಅಬ್ಬರ ಮುಂದುವರಿದಿದ್ದು, ಹಲವೆಡೆ ರಸ್ತೆಗಳು ಹಾಗೂ ಅಂಡರ್‌ಪಾಸ್‌ಗಳು ಜಲಾವೃತಗೊಂಡಿವೆ. ಕೆಲವೆಡೆ ಮರಗಳು ಧರೆಗುರುಳಿದ ಘಟನೆಗಳೂ ವರದಿಯಾಗಿವೆ.

ಕೆ.ಆರ್. ಸರ್ಕಲ್ ಸೇರಿದಂತೆ ಪ್ರಮುಖ ಪ್ರದೇಶಗಳಲ್ಲಿ ನೀರು ನಿಂತು ವಾಹನ ಸಂಚಾರಕ್ಕೆ ತೊಂದರೆ ಉಂಟಾಯಿತು.

ಈ ನಡುವೆ ಬಿಬಿಎಂಪಿ ಕಮಿಷನರ್ ಮಹೇಶ್ವರ್ ರಾವ್ ಅಂಡರ್‌ಪಾಸ್‌ಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಬಳಿಕ ಮಾತನಾಡಿದ ಅವರು, ಅಂಡರ್‌ಪಾಸ್‌ಗಳಲ್ಲಿ ನೀರು ಸಂಗ್ರಹವಾಗದಂತೆ ಹಾಗೂ ರಸ್ತೆಗಳಲ್ಲಿ ನೀರು ಸರಾಗವಾಗಿ ಹರಿಯುವಂತೆ ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ತಿಳಿಸಿದರು.

ಕಸದ ಸಮರ್ಪಕ ವಿಲೇವಾರಿ ಹಾಗೂ ಒಣಗಿದ ಮರಗಳ ತೆರವಿಗೆ ವಿಶೇಷ ಗಮನ ನೀಡಲಾಗಿದೆ ಎಂದು ಹೇಳಿದರು.

### ಡಿಕೆಶಿ ಸಂಕಲ್ಪ ಪೂಜೆ ಬಳಿಕ ಸಿಎಂ ಯೋಗದ ಭಾರೀ ಚರ್ಚೆ; ರಾಜ್ಯದ ಗಮನ ಸೆಳೆದ ಲಕ್ಷ್ಮೇಶ್ವರದ ಧರ್ಮಕ್ಷೇತ್ರ

# ಮುಕ್ತಿಮಂದಿರದ 40 ದಿನಗಳ ಪವಾಡ!

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಲಕ್ಷ್ಮೇಶ್ವರ ತಾಲೂಕಿನ ಮುಕ್ತಿಮಂದಿರ ಧರ್ಮಕ್ಷೇತ್ರಕ್ಕೆ ಕಳೆದ ಎಪ್ರಿಲ್ 19ರಂದು ದಿಢೀರ್ ಭೇಟಿ ನೀಡಿ, ಕ್ಷೇತ್ರದ ತಮ್ಮ ಆರಾಧ್ಯ ದೇವರಾದ ರಂಭಾಪುರಿ ಲಿಂ. ಜಗದ್ಗುರು ವೀರಗಂಗಾಧರ ಶಿವಾಚಾರ್ಯ ಸ್ವಾಮೀಜಿಯವರ ಗದ್ದುಗೆಗೆ ಸಂಕಲ್ಪ ಸಹಿತ ವಿಶೇಷ ಪೂಜೆ ಸಲ್ಲಿಸಿದ ಕೇವಲ 40 ದಿನಗಳಲ್ಲಿಯೇ ಮುಖ್ಯಮಂತ್ರಿ ಯೋಗ ಕೂಡಿ ಬಂದಿರುವುದು ಇದೀಗ ರಾಜ್ಯ ರಾಜಕೀಯದಲ್ಲಿ ಭಾರೀ ಚರ್ಚೆಗೆ ಕಾರಣವಾಗಿದೆ.

ಮುಖ್ಯಮಂತ್ರಿ ಬದಲಾವಣೆ ಚರ್ಚೆ ತೀವ್ರಗೊಂಡಿದ್ದ ವೇಳೆಯಲ್ಲೇ ಡಿಕೆಶಿ ಅವರ ಮುಕ್ತಿಮಂದಿರ ಭೇಟಿ ರಾಜಕೀಯ ಹಾಗೂ ಧಾರ್ಮಿಕ ವಲಯದಲ್ಲಿ ವಿಶೇಷ ಕುತೂಹಲ ಮೂಡಿಸಿತ್ತು. ಇದೀಗ ಕೇವಲ 40 ದಿನಗಳಲ್ಲೇ ಸಿಎಂ ಪಟ್ಟದ ಚರ್ಚೆ ತಾರಕಕ್ಕೇರಿರುವುದು "ಮುಕ್ತಿಮಂದಿರದ ಮಹಿಮೆ" ಎನ್ನುವ ಮಾತಿಗೆ ಮತ್ತಷ್ಟು ಬಲ ತುಂಬಿದಂತಾಗಿದೆ.

ಆ ದಿನ ಮಧ್ಯಾಹ್ನ ಕ್ಷೇತ್ರಕ್ಕೆ ಆಗಮಿಸಿದ್ದ ಡಿಕೆಶಿ, ವಾಹನದಿಂದ ಇಳಿದ ತಕ್ಷಣ ಯಾರೂ ದೇವಸ್ಥಾನದ ಒಳಗೆ ಬರದಂತೆ ಮನವಿ ಮಾಡಿ ನೇರವಾಗಿ ಗದ್ದುಗೆ ಸನ್ನಿಧಿಗೆ ತೆರಳಿದ್ದರು. ಸುಮಾರು ಎರಡು ಗಂಟೆಗಳ ಕಾಲ ವಿಶೇಷ ಪೂಜೆ, ಅಭಿಷೇಕ, ಮಂಗಳಾರತಿ ನೆರವೇರಿಸಿ ಸಂಕಲ್ಪ ಸಲ್ಲಿಸಿದ್ದರು.

> "ಮುಕ್ತಿಮಂದಿರದಲ್ಲಿ ವಿಶೇಷ ಶಕ್ತಿ ನೆಲೆಸಿದೆ. ಗುರುವಿನ ಆಶೀರ್ವಾದ ನನ್ನಲ್ಲಿ ಹೊಸ ಚೈತನ್ಯ ತುಂಬುತ್ತದೆ."
> – ಡಿ.ಕೆ.ಶಿವಕುಮಾರ್



ದೈವಭಕ್ತರಾಗಿರುವ ಡಿಕೆಶಿ ಗದ್ದುಗೆಗೆ ಸ್ವತಃ ಪೂಜೆ ಸಲ್ಲಿಸಿ, "ನನ್ನಲ್ಲಿರುವ ಯಾವುದೇ ಕಲ್ಮಷಗಳು ದೂರವಾಗಲಿ, ಮುಂದಿನ ದಿನಗಳಲ್ಲಿ ಒಳ್ಳೆಯದಾಗಲಿ" ಎಂದು ಪ್ರಾರ್ಥನೆ ಸಲ್ಲಿಸಿದ್ದರು ಎನ್ನಲಾಗಿದೆ.

ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಈ ವೇಳೆ ಡಿಕೆಶಿ ಅವರಿಂದ ಸಂಕಲ್ಪ ಸಿದ್ಧಿಗಾಗಿ ವಿಶೇಷ ಪೂಜೆ ಮಾಡಿಸಿದ್ದು ಗಮನ ಸೆಳೆದಿತ್ತು.

ಆ ವೇಳೆ ಶ್ರೀಗಳು ಮಾತನಾಡಿ, "ಲಿಂ. ಶ್ರೀಗಳ ಪವಾಡದ ಅರಿವು ಡಿಕೆಶಿ ಅವರಿಗೆ ಇದೆ. ಅವರು ಪೂಜೆ ಸಲ್ಲಿಸಿ ಬೇಡಿಕೆ ಇಟ್ಟಿದ್ದಾರೆ. ಲಿಂ. ಶ್ರೀಗಳ ಆಶೀರ್ವಾದದಿಂದ ಅವರು ಅಂದುಕೊಂಡ ಹುದ್ದೆ ಶೀಘ್ರದಲ್ಲೇ ದೊರೆಯಲಿದೆ" ಎಂದು ಹೇಳಿದ್ದರೆಂದು ತಿಳಿದು ಬಂದಿದೆ.

ಸಂಕಲ್ಪ ಪೂಜೆ ಬಳಿಕ ಮಾತನಾಡಿದ್ದ ಡಿಕೆಶಿ, "ನಡೆದಾಡುವ ದೇವರಾಗಿದ್ದ ಲಿಂ. ಜಗದ್ಗುರು ವೀರಗಂಗಾಧರ ಅಜ್ಜನವರ ಪವಿತ್ರ ಕ್ಷೇತ್ರವಾಗಿರುವ ಮುಕ್ತಿಮಂದಿರದಲ್ಲಿ ವಿಶೇಷ ಶಕ್ತಿ ನೆಲೆಸಿದೆ. ಗುರುವಿನ ಆಶೀರ್ವಾದದ ಶಕ್ತಿ ನನಗೆ ಹೊಸ ಚೈತನ್ಯ ತುಂಬುತ್ತದೆ. ಅಜ್ಜನ ಮಹಿಮೆ ಅಪಾರವಾಗಿದೆ. ಅಜ್ಜನ ಗದ್ದುಗೆಗೆ ಮೊರೆ ಹೋಗಿದ್ದೇನೆ, ಒಳ್ಳೆಯದಾಗುತ್ತದೆ ಎಂಬ ನಂಬಿಕೆಯಿದೆ" ಎಂದು ಹೇಳಿದ್ದರು.

ಈಗ ಮುಕ್ತಿಮಂದಿರ ಧರ್ಮಕ್ಷೇತ್ರದ ಲಿಂ. ಜಗದ್ಗುರುಗಳ ಗದ್ದುಗೆ ಮಹಿಮೆ ರಾಜ್ಯಾದ್ಯಂತ ಸದ್ದು ಮಾಡುತ್ತಿದ್ದು, ಜಗದ್ಗುರು ವೀರಗಂಗಾಧರ ಭಗವತ್ಪಾದರ ಮಹಿಮೆ ಕುರಿತು ಭಕ್ತವಲಯದಲ್ಲಿ ವ್ಯಾಪಕ ಚರ್ಚೆ ನಡೆಯುತ್ತಿದೆ. ಅಲ್ಲದೆ ಮುಕ್ತಿಮಂದಿರ ಧರ್ಮಕ್ಷೇತ್ರದತ್ತ ಜನರ ಗಮನ ಮತ್ತಷ್ಟು ಸೆಳೆಯುವಂತಾಗಿದೆ.

**ಡಿಕೆಶಿ ಮುಕ್ತಿಮಂದಿರ ಭೇಟಿ ವೇಳೆ ಏನಾಯಿತು?**

- ಎಪ್ರಿಲ್ 19ರಂದು ದಿಢೀರ್ ಆಗಿ ಮುಕ್ತಿಮಂದಿರಕ್ಕೆ ಆಗಮನ
- ದೇವಸ್ಥಾನ ಒಳಗೆ ಯಾರೂ ಬರಬಾರದು ಎಂದು ಸೂಚನೆ
- ಸುಮಾರು 2 ಗಂಟೆಗಳ ಕಾಲ ವಿಶೇಷ ಸಂಕಲ್ಪ ಪೂಜೆ
- ಲಿಂ. ಜಗದ್ಗುರು ವೀರಗಂಗಾಧರ ಅಜ್ಜನ ಗದ್ದುಗೆಗೆ ಅಭಿಷೇಕ
- "ನನ್ನಲ್ಲಿರುವ ಕಲ್ಮಷಗಳು ದೂರವಾಗಲಿ" ಎಂದು ಪ್ರಾರ್ಥನೆ
- "ಮುಂದಿನ ದಿನಗಳಲ್ಲಿ ಒಳ್ಳೆಯದಾಗಲಿ" ಎಂದು ಬೇಡಿಕೆ
- ಈಗ 40 ದಿನಗಳಲ್ಲೇ ಸಿಎಂ ಯೋಗದ ಭಾರೀ ಚರ್ಚೆ

### ಗದಗ ಜಿಲ್ಲೆಯ ಹಿರಿಯ ಶಾಸಕರಿಗೆ ಸಂಪುಟದಲ್ಲಿ ಅವಕಾಶ ಕಲ್ಪಿಸಿ" : ವಿಶ್ವನಾಥ ಖಾನಾಪೂರ ಮನವಿ

# ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ನೂತನ ಸರ್ಕಾರದಲ್ಲಿ ಗದಗ ಜಿಲ್ಲೆಯ ರೋಣ ಕ್ಷೇತ್ರದ ಹಿರಿಯ ಶಾಸಕ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡಬೇಕೆಂದು ಗದಗ ಜಿಲ್ಲಾ ವಿಕಾಸ ವೇದಿಕೆಯ ವಿಶ್ವನಾಥ ಖಾನಾಪೂರ ಅವರು ಆಗ್ರಹಿಸಿದ್ದಾರೆ.

ಈ ಕುರಿತು ನೂತನ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಕಾಂಗ್ರೆಸ್ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಮನವಿ ಮಾಡಿದ್ದಾರೆ.

ಉತ್ತರ ಕರ್ನಾಟಕದ ಪ್ರಭಾವಿ ಸಚಿವರಾದ ಹೆಚ್. ಕೆ. ಪಾಟೀಲ ಅವರ ಜೊತೆಗೆ ಜಿಲ್ಲೆಯ ಅಭಿವೃದ್ಧಿ ದೃಷ್ಟಿಯಿಂದ ಜಿ.ಎಸ್. ಪಾಟೀಲರು ಹಿರಿಯ ಹಾಗೂ ಅನುಭವಿ ಶಾಸಕರಾಗಿದ್ದು, ಸತತ ನಾಲ್ಕು



ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಹಿನ್ನೆಲೆ ಅವರಿಗೆ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದ್ದಾರೆ.

ಜಿ.ಎಸ್. ಪಾಟೀಲರ ಕುಟುಂಬ ರಾಜಕೀಯ ಹಾಗೂ ಆಡಳಿತ ಕ್ಷೇತ್ರದಲ್ಲಿ ವಿಶಿಷ್ಟ ಸೇವೆ ಸಲ್ಲಿಸಿದೆ. ಜೆ.ಎಚ್. ಪಟೇಲರ ಮುಖ್ಯ ಕಾರ್ಯದರ್ಶಿಯಾಗಿ ಬಿ.ಎಸ್. ಪಾಟೀಲರು ಸೇವೆ ಸಲ್ಲಿಸಿದ್ದು, ಗದಗ ಜಿಲ್ಲಾ ರಚನೆ ಹಾಗೂ ಮೂಲಭೂತ ಸೌಕರ್ಯ ಅಭಿವೃದ್ಧಿಗೆ ಪ್ರಾಮಾಣಿಕ ಪ್ರಯತ್ನ ಮಾಡಿದ್ದಾರೆ ಎಂದು ಹೇಳಿದರು.

> "ಸತತ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿರುವ ಜಿ.ಎಸ್. ಪಾಟೀಲರಿಗೆ ಈ ಬಾರಿ ಸಚಿವ ಸ್ಥಾನ ನೀಡುವುದು ಗದಗ ಜಿಲ್ಲೆಯ ಜನರ ಒತ್ತಾಸೆಯಾಗಿದೆ."
> – ವಿಶ್ವನಾಥ ಖಾನಾಪೂರ,
> ಅಧ್ಯಕ್ಷರು, ಗದಗ ಜಿಲ್ಲಾ ವಿಕಾಸ ವೇದಿಕೆ

ಇದೇ ಕುಟುಂಬದ ಆರ್.ಎಸ್. ಪಾಟೀಲರು ಗದಗ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾಗಿಯೂ, ಬಾಗಲಕೋಟ ಲೋಕಸಭಾ ಸದಸ್ಯರಾಗಿಯೂ ಸೇವೆ ಸಲ್ಲಿಸಿದ್ದಾರೆ. ಐ.ಎಸ್. ಪಾಟೀಲರು ರೋಣ ಎಪಿಎಂಸಿ ಅಧ್ಯಕ್ಷರಾಗಿದ್ದು, ಕೆಸಿಸಿ ಬ್ಯಾಂಕ್ ಅಧ್ಯಕ್ಷರಾಗಿಯೂ ಕಾರ್ಯನಿರ್ವಹಿಸಿದ್ದಾರೆ ಎಂದು ಉಲ್ಲೇಖಿಸಿದ್ದಾರೆ.

ಅಖಂಡ ಧಾರವಾಡ ಜಿಲ್ಲೆಯ ಗದಗ, ಹಾವೇರಿ ಹಾಗೂ ಧಾರವಾಡ ಭಾಗದಲ್ಲಿ ಈ ಕುಟುಂಬ ತನ್ನದೇ ಆದ ಪ್ರಭಾವ ಹೊಂದಿದ್ದು, ರಾಜಕೀಯ ಅನುಭವದ ಮೂಲಕ ರಾಜ್ಯ ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಪ್ರಾಮಾಣಿಕವಾಗಿ ಶ್ರಮಿಸಬಲ್ಲ ಸಾಮರ್ಥ್ಯ ಜಿ.ಎಸ್ ಪಾಟೀಲ ಅವರಿಗಿದೆ ಎಂದು ವಿಶ್ವನಾಥ ಖಾನಾಪೂರ ಅಭಿಪ್ರಾಯಪಟ್ಟಿದ್ದಾರೆ.

ಈ ಬಾರಿ ಸಚಿವ ಸಂಪುಟದಲ್ಲಿ ಜಿ.ಎಸ್. ಪಾಟೀಲರಿಗೆ ಸ್ಥಾನ ನೀಡುವುದು ಗದಗ ಜಿಲ್ಲೆಯ ಜನರ ಆಶಯವಾಗಿದೆ ಎಂದು ಅವರು ಮನವಿಯಲ್ಲಿ ತಿಳಿಸಿದ್ದಾರೆ.

## ಪುಟ್ಟರಂಗಶೆಟ್ಟಿಗೆ ಸಚಿವ ಸ್ಥಾನಕ್ಕೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಗದಗ

ಶೈಕ್ಷಣಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಹಿಂದುಳಿದಿರುವ ಉಪ್ಪಾರ ಸಮಾಜದ ರಾಜ್ಯದ ಏಕೈಕ ಶಾಸಕ ಪುಟ್ಟರಂಗಶೆಟ್ಟಿ ಅವರಿಗೆ ರಾಜ್ಯ ಸಚಿವ ಸಂಪುಟದಲ್ಲಿ ಸೂಕ್ತ ಸ್ಥಾನ ನೀಡಬೇಕು ಎಂದು ಹೊಸದುರ್ಗದ ಭಗೀರಥ ಗುರುಪೀಠದ ಜಗದ್ಗುರು ಡಾ. ಪುರುಷೋತ್ತಮಾನಂದಪುರಿ ಸ್ವಾಮೀಜಿ ಆಗ್ರಹಿಸಿದರು.

ನಗರದ ಪತ್ರಿಕಾ ಭವನದಲ್ಲಿ ಶುಕ್ರವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಪುಟ್ಟರಂಗಶೆಟ್ಟಿ ಅವರು ಸತತ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿ ಜನಸೇವೆ ಮಾಡುತ್ತಿದ್ದಾರೆ. ಈ ಹಿಂದೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಚಿವ ಸ್ಥಾನ ನೀಡುವುದಾಗಿ ಭರವಸೆ ನೀಡಿದ್ದರು. ಆದರೆ ಆ ಭರವಸೆ ಇನ್ನೂ ಈಡೇರಿಲ್ಲ ಎಂದು ಹೇಳಿದರು.

ಈಗ ಮತ್ತೆ ಸಚಿವ ಸಂಪುಟ ಪುನರ್‌ರಚನೆ ನಡೆಯುತ್ತಿರುವ ಹಿನ್ನೆಲೆಯಲ್ಲಿ ಉಪ್ಪಾರ ಸಮಾಜಕ್ಕೆ ಪ್ರಾತಿನಿಧ್ಯ ನೀಡಲೇಬೇಕು ಎಂದು ಒತ್ತಾಯಿಸಿದರು.

ಇದೇ ವೇಳೆ ಉಪ್ಪಾರ ಸಮಾಜದ ಮೀಸಲಾತಿ ಕುರಿತು ಮಾತನಾಡಿದ ಶ್ರೀಗಳು, ಸಮಾಜದ ಮೀಸಲಾತಿ ವರದಿಯನ್ನು ರಾಜ್ಯ ಸರ್ಕಾರ ಕೂಡಲೇ ಕೇಂದ್ರ ಸರ್ಕಾರಕ್ಕೆ ಶಿಫಾರಸು ಮಾಡಬೇಕು. ಮೀಸಲಾತಿ ಸೌಲಭ್ಯ ದೊ–ರೆತರೆ ಮಾತ್ರ ಹಿಂದುಳಿದ ಸಮುದಾಯ ಮುಖ್ಯವಾಹಿನಿಗೆ ಬರಲು ಸಾಧ್ಯ ಎಂದು ಹೇಳಿದರು.

ಉಪ್ಪಾರ ಅಭಿವೃದ್ಧಿ ನಿಗಮದ ಅಧ್ಯಕ್ಷ ಭರಮಣ್ಣ ಉಪ್ಪಾರ ಮಾತನಾಡಿ, ರಾಜ್ಯದಲ್ಲಿ ಉಪ್ಪಾರ ಸಮಾಜದಿಂದ ಆಯ್ಕೆಯಾಗಿರುವ ಏಕೈಕ ಶಾಸಕರು ಪುಟ್ಟರಂಗಶೆಟ್ಟಿ. ಸಮಾಜವನ್ನು ಸಂಘಟಿಸುವಲ್ಲಿ ಹಾಗೂ ತಳಮಟ್ಟದ ಜನರಿಗೆ ನ್ಯಾಯ ದೊರಕಿಸುವಲ್ಲಿ ಅವರು ನಿರಂತರವಾಗಿ ಶ್ರಮಿಸುತ್ತಿದ್ದಾರೆ. ಅವರ ಹಿರಿತನ ಪರಿಗಣಿಸಿ ಸಚಿವ ಸಂಪುಟದಲ್ಲಿ ಸ್ಥಾನ ನೀಡಬೇಕು ಎಂದು ಒತ್ತಾಯಿಸಿದರು.

ಸುದ್ದಿಗೋಷ್ಠಿಯಲ್ಲಿ ಶಮಾನಂದ ಪೂಜಾರ, ವಿರೂಪಾಕ್ಷಪ್ಪ ಉಪ್ಪಾರ, ಈರಣ್ಣ ಗಡಾದ, ಅಶೋಕ ಇಳಕಲ್ ಸೇರಿದಂತೆ ಸಮಾಜದ ಪ್ರಮುಖರು ಉಪಸ್ಥಿತರಿದ್ದರು.

## ಏಷ್ಯನ್ ಪ್ಯಾರಾ ಥ್ರೋಬಾಲ್‌ಗೆ ಗದಗ ಕ್ರೀಡಾಪಟುಗಳ ಆಯ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜೂನ್ 2ರಿಂದ 5ರವರೆಗೆ ಮಲೇಷ್ಯಾದಲ್ಲಿ ನಡೆಯಲಿರುವ 2ನೇ ಏಷ್ಯನ್ ಪ್ಯಾರಾ ಥ್ರೋಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಭಾರತ ತಂಡವನ್ನು ಪ್ರತಿನಿಧಿಸಲು ಗದಗ ಜಿಲ್ಲೆಯ ಪ್ಯಾರಾ ಕ್ರೀಡಾಪಟುಗಳು ಆಯ್ಕೆಯಾಗಿದ್ದಾರೆ.

ಗದಗಿನ ಮಾಲತಿ ಇನಾಮತಿ ಅವರು ಈ ಬಾರಿಯೂ ಭಾರತ ತಂಡದ ನಾಯಕಿಯಾಗಿ ಆಯ್ಕೆಯಾಗಿದ್ದು, ಅಂತಾರಾಷ್ಟ್ರೀಯ ಮಟ್ಟದಲ್ಲಿ ಜಿಲ್ಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾರೆ.

ಕಳೆದ ಬಾರಿ ನಡೆದ ದಕ್ಷಿಣ ಏಷ್ಯನ್ ಪ್ಯಾರಾ ಥ್ರೋಬಾಲ್ ಚಾಂಪಿಯನ್‌ಶಿಪ್‌ನಲ್ಲಿ ಅವರ ನಾಯಕತ್ವದಲ್ಲಿ ಭಾರತ ತಂಡ ಚಿನ್ನದ ಪದಕ ಗೆದ್ದು ಸಾಧನೆ ಮಾಡಿತ್ತು.




ಇದೇ ವೇಳೆ ಬಿಂಕದಕಟ್ಟಿ ಗ್ರಾಮದ ಪ್ಯಾರಾ ಥ್ರೋಬಾಲ್ ಕ್ರೀಡಾಪಟುವಾದ ದೇವಮ್ಮಾ ಗರೇಬಾಳ ಅವರು ಕೂಡ ಅಂತರರಾಷ್ಟ್ರೀಯ ಸ್ಪರ್ಧೆಯಲ್ಲಿ ಭಾಗವಹಿಸಲಿದ್ದಾರೆ.

ಗದಗಿನ ರಿಯಾಜ್ ಬಾನಿ ಅವರು ಭಾರತೀಯ ತಂಡದ ಸಹಾಯಕ ಕೋಚ್ ಆಗಿ ಮಲೇಷ್ಯಾಕ್ಕೆ ತೆರಳಲಿದ್ದಾರೆ.

ಜಿಲ್ಲೆಯ ಕ್ರೀಡಾಪಟುಗಳ ಈ ಸಾಧನೆಗೆ ಕ್ರೀಡಾಭಿಮಾನಿಗಳು ಹಾಗೂ ಸಾರ್ವಜನಿಕರು ಅಭಿನಂದನೆ ಸಲ್ಲಿಸಿದ್ದಾರೆ.

## ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನಕ್ಕೆ ಒತ್ತಾಯ

■ವಿಜಯಸಾಕ್ಷಿ ಸುದ್ದಿ, ಡಂಬಳ



ರಾಜ್ಯದಲ್ಲಿ ಡಿ.ಕೆ.ಶಿವಕುಮಾರ್ ನೇತೃತ್ವದಲ್ಲಿ ಹೊಸ ಸರ್ಕಾರ ರಚನೆಯಾಗಲಿದ್ದು, ರೋಣ ಮತಕ್ಷೇತ್ರದ ಜನಪ್ರಿಯ ಶಾಸಕ ಜಿ.ಎಸ್. ಪಾಟೀಲ ಅವರಿಗೆ ಸಚಿವ ಸ್ಥಾನ ನೀಡಬೇಕೆಂದು ಮುಂಡರಗಿ ಗ್ಯಾರಂಟಿ ಸಮಿತಿ ಅಧ್ಯಕ್ಷ ಹಾಗೂ ಮುಂಡರಗಿ ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಿ.ಡಿ. ಮೋರನಾಳ ಕಾಂಗ್ರೆಸ್ ಹೈಕಮಾಂಡ್ ಅನ್ನು ಒತ್ತಾಯಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಜಿ.ಎಸ್. ಪಾಟೀಲರು ರೋಣ ಮತಕ್ಷೇತ್ರದಲ್ಲಿ ಸತತ ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾಗಿದ್ದು, ಜಿಲ್ಲೆಯ ಕಾಂಗ್ರೆಸ್ ಶಾಸಕರ ಪೈಕಿ ಹಿರಿಯ ಹಾಗೂ ಅನುಭವಿ ನಾಯಕರಾಗಿದ್ದಾರೆ ಎಂದು ತಿಳಿಸಿದ್ದಾರೆ.

ಕಾಂಗ್ರೆಸ್ ಪಕ್ಷವನ್ನು ಸಂಘಟಿಸುವಲ್ಲಿ ಅವರು ಪ್ರಮುಖ ಪಾತ್ರವಹಿಸಿದ್ದು, ಕ್ಷೇತ್ರವನ್ನು ಕಾಂಗ್ರೆಸ್‌ನ ಭದ್ರಕೋಟೆಯಾಗಿ ರೂಪಿಸಿದ್ದಾರೆ ಎಂದು ಹೇಳಿದರು.

ವಿಧಾನಸಭೆ ಚುನಾವಣೆಯಲ್ಲಿ ಸುಮಾರು 25 ಸಾವಿರ ಮತಗಳ ಭಾರೀ ಅಂತರದಲ್ಲಿ ಜಯಗಳಿಸಿರುವುದು ಅವರ ಜನಪ್ರಿಯತೆಗೆ ಸಾಕ್ಷಿಯಾಗಿದೆ. ರೈತರು, ಕಾರ್ಮಿಕರು, ಬಡವರು ಹಾಗೂ ಹಿಂದುಳಿದ ವರ್ಗಗಳ ಪರ ಸದಾ ಸ್ಪಂದಿಸುವ ಜನನಾಯಕರಾಗಿ ಜಿ.ಎಸ್. ಪಾಟೀಲರು ಗುರುತಿಸಿಕೊಂಡಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಹಿಂದಿನ ಸಿದ್ದರಾಮಯ್ಯ ಸರ್ಕಾರದ ಅವಧಿಯಲ್ಲಿಯೇ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡುವ ಕುರಿತು ಚರ್ಚೆ ನಡೆದಿತ್ತು. ಆಗ ಹೈಕಮಾಂಡ್ ಮುಂದಿನ ಸಂಪುಟ ಪುನರ್‌ರಚನೆಯಲ್ಲಿ ಅವಕಾಶ ನೀಡುವುದಾಗಿ ಭರವಸೆ ನೀಡಿ ನಿಗಮ ಮಂಡಳಿ ಅಧ್ಯಕ್ಷ ಸ್ಥಾನ ನೀಡಿತ್ತು ಎಂದು ತಿಳಿಸಿದ್ದಾರೆ.

ಈಗ ಸೂಕ್ತ ಸಮಯ ಬಂದಿರುವುದರಿಂದ, ಕಾಂಗ್ರೆಸ್ ಹೈಕಮಾಂಡ್ ತನ್ನ ಭರವಸೆಯನ್ನು ಈಡೇರಿಸಿ ಜಿ.ಎಸ್. ಪಾಟೀಲರಿಗೆ ಸಚಿವ ಸ್ಥಾನ ನೀಡುವ ಮೂಲಕ ರಾಜ್ಯ ಹಾಗೂ ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ವೇಗ ನೀಡಲು ಅವಕಾಶ ಕಲ್ಪಿಸಬೇಕು ಎಂದು ಡಿ.ಡಿ. ಮೋರನಾಳ ಮನವಿ ಮಾಡಿದ್ದಾರೆ.

# ಸರ್ಕಾರದ ಭೂವ್ಯಾಪಾರ ಸಲ್ಲ!

ಸಂಪಾದಕರಿಗೆ ಪತ್ರ

ಮಾನ್ಯರೇ,

ಬೆಂಗಳೂರಿನ ಸುತ್ತಮುತ್ತಲಿನ ಹಸಿರು ವಲಯವನ್ನು ನುಂಗಿ ಹಾಕಲು ಹೊರಟಿರುವ ಬೃಹತ್ ಉಪನಗರ ಯೋಜನೆಗಳು ಕೇವಲ ಅಧಿಕೃತ ರಿಯಲ್ ಎಸ್ಟೇಟ್ ದಂಧೆಯಾಗಿ ಮಾರ್ಪಟ್ಟಿದೆಯೆಂಬುದು ಜನಜನಿತ. ಕೃಷಿ ಪ್ರಧಾನ ವಲಯವಾಗಿರುವ ಬಿಡದಿಯ ತೆಂಗು, ಹಿಪ್ಪನೇರಳೆ ಬೆಳೆಯುವ ಫಲವತ್ತಾದ 8,000ಕ್ಕೂ ಹೆಚ್ಚು ಎಕರೆ ನೀರಾವರಿ ಭೂಮಿಯನ್ನು ಬಲವಂತವಾಗಿ ಕಸಿದುಕೊಳ್ಳುತ್ತಿರುವುದು ಅತ್ಯಂತ ಕ್ರೂರ ಹಾಗೂ ಅಮಾನವೀಯ ಕ್ರಮವಾಗಿದೆ.

ರೈತರ ಜಮೀನಿಗೆ ಕೇವಲ ತಲಾ 2 ಕೋಟಿ ರೂಪಾಯಿ ನಿಗದಿಪಡಿಸಿ, ಖಾಸಗಿ ಹಿತಾಸಕ್ತಿಗಳ ಜಾಗಕ್ಕೆ ಬರೋಬ್ಬರಿ 14 ಕೋಟಿ ರೂಪಾಯಿ ಬೆಲೆ ಕಟ್ಟುವುದು ಸರ್ಕಾರದ ಪರಮ ವಂಚನೆ ಮತ್ತು ಹಗಲು ದರೋಡೆಯನ್ನು ಬಿಂಬಿಸುತ್ತದೆ. ಶೇಕಡಾ 80ರಷ್ಟು ರೈತರು ಸಮ್ಮತಿಸಿದ್ದಾರೆ ಎಂಬ ಆಡಳಿತಶಾಹಿಯ ಸುಳ್ಳು ವಾದವು ಸಂಪೂರ್ಣ ನಗೆಪಾಟಲಿಗೀಡಾಗಿದೆ.

ಸೈಟುಗಳ ಮಾರಾಟ ಮತ್ತು ತೆರಿಗೆಯ ಮೂಲಕ ಬಡ ಅನ್ನದಾತರನ್ನು ಬೀದಿಗೆ ತಳ್ಳಿ 40,000 ಕೋಟಿ ರೂಪಾಯಿಗೂ ಅಧಿಕ ಹಣ ಲೂಟಿ ಮಾಡಲು ಹೊರಟಿರುವ ಈ ಜನವಿರೋಧಿ ನೀತಿಯನ್ನು ತಕ್ಷಣವೇ ನಿಲ್ಲಿಸಬೇಕಾಗಿದೆ. ಅಭಿವೃದ್ಧಿಯ ಹೆಸರಿನಲ್ಲಿ ನಡೆಯುತ್ತಿರುವ ಈ ದಲ್ಲಾಳಿ ಆಡಳಿತಕ್ಕೆ ಜನರೇ ತಕ್ಕ ಪಾಠ ಕಲಿಸಲಿ.

**– ಡಾ. ವಿಜಯಕುಮಾರ್ ಎಚ್.ಕೆ.**
**ರಾಯಚೂರು**

# ಐಪಿಆರ್ ವಿಷಯದ ಕಾರ್ಯಾಗಾರ ಜೂ. 16ರಿಂದ

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿಯ ವತಿಯಿಂದ "ಉನ್ನತ ಬೌದ್ಧಿಕ ಆಸ್ತಿ ಹಕ್ಕುಗಳು (ಐಪಿಆರ್)" ವಿಷಯದ ಕುರಿತು ಜೂನ್ 16ರಿಂದ 20ರವರೆಗೆ ಐದು ದಿನಗಳ ತರಬೇತಿ ಕಾರ್ಯಾಗಾರವನ್ನು ಅಕಾಡೆಮಿಯ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಕಾರ್ಯಾಗಾರದಲ್ಲಿ ವಿವಿಧ ಪ್ರತಿಷ್ಠಿತ ಸಂಸ್ಥೆಗಳ ಹೆಸರಾಂತ ವಿಜ್ಞಾನಿಗಳು ಹಾಗೂ ತಂತ್ರಜ್ಞಾನಿಗಳು ಉಪನ್ಯಾಸ ನೀಡಲಿದ್ದು, ವಿಜ್ಞಾನ ಪದವಿ, ಸ್ನಾತಕೋತ್ತರ ಹಾಗೂ ಸಂಶೋಧನಾ ವಿದ್ಯಾರ್ಥಿಗಳು, ಉಪನ್ಯಾಸಕರು, ಪ್ರಾಧ್ಯಾಪಕರು, ವಿಜ್ಞಾನಾಸಕ್ತರು ಹಾಗೂ ಕೈಗಾರಿಕೋದ್ಯಮದ ಪ್ರತಿನಿಧಿಗಳು ಭಾಗವಹಿಸಬಹುದಾಗಿದೆ.

ಆಸಕ್ತರು ಜೂನ್ 12ರೊಳಗೆ ನೋಂದಾಯಿಸಿಕೊಳ್ಳಬೇಕಿದ್ದು, ಹೆಚ್ಚಿನ ಮಾಹಿತಿಗಾಗಿ ಕಾರ್ಯಾಗಾರದ ಸಂಯೋಜಕರಾದ ವೈಜ್ಞಾನಿಕ ಅಧಿಕಾರಿ ವಿ.ಜಿ. ಉಮೇಶ (ಮೊ: 9743084194) ಅವರನ್ನು ಸಂಪರ್ಕಿಸಬಹುದು.

ಈ ಕುರಿತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಆನಂದ ಆರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಶಾಸಕ ಜಿ.ಎಸ್. ಪಾಟೀಲ ಅಭಿವೃದ್ಧಿ ಕಾರ್ಯ ಶ್ಲಾಘಿಸಿದ ಡಿ.ಡಿ. ಮೋರನಾಳ**

# ಜನಪರ ಆಡಳಿತಕ್ಕೆ ಗ್ರಾಮೀಣ ಜನರ ಮೆಚ್ಚುಗೆ

**■ವಿಜಯಸಾಕ್ಷಿ ಸುದ್ದಿ, ಡಂಬಳ**

"ಕ್ಷೇತ್ರದ ಪ್ರತಿಯೊಬ್ಬರಿಗೂ ಸರ್ಕಾರದ ಗ್ಯಾರಂಟಿ ಯೋಜನೆಗಳ ಸೌಲಭ್ಯ ತಲುಪಿಸುವ ಜೊತೆಗೆ ಗ್ರಾಮೀಣ ಭಾಗದ ಅಭಿವೃದ್ಧಿಗೆ ನಿರಂತರವಾಗಿ ಶ್ರಮಿಸುತ್ತಿರುವ ಶಾಸಕ ಜಿ.ಎಸ್. ಪಾಟೀಲರು ಜನತೆಯ ನಿಜವಾದ ಜನನಾಯಕರು" ಎಂದು ಮುಂಡರಗಿ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಡಿ.ಡಿ. ಮೋರನಾಳ ಹೇಳಿದರು.

ಡಂಬಳ ಹೋಬಳಿಯ ವಿವಿಧ ಗ್ರಾಮಗಳಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2025–26ನೇ ಸಾಲಿನ ಪ್ರಗತಿ ಕಾಲೋನಿ ಯೋಜನೆ ಅಡಿಯಲ್ಲಿ ಹಮ್ಮಿಕೊಳ್ಳಲಾದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ವೆಂಕಟಾಪೂರ ಗ್ರಾಮದ ಎಸ್.ಸಿ. ಕಾಲೋನಿಯಲ್ಲಿ ₹15 ಲಕ್ಷ ವೆಚ್ಚದ ಸಿ.ಸಿ. ರಸ್ತೆ ಹಾಗೂ ಹೈಮಾಸ್ಕ್ ಅಳವಡಿಕೆ, ಹೈತಾಪೂರ ಗ್ರಾಮದ ಎಸ್.ಸಿ. ಕಾಲೋನಿಯಲ್ಲಿ ₹25 ಲಕ್ಷ ವೆಚ್ಚದ ಸಿ.ಸಿ. ರಸ್ತೆ, ಮುರಡಿ ತಾಂಡಾ ಗ್ರಾಮದ ಎಸ್.ಸಿ. ಕಾಲೋನಿಯಲ್ಲಿ ₹15 ಲಕ್ಷ ವೆಚ್ಚದ ಸಿ.ಸಿ. ರಸ್ತೆ ಹಾಗೂ ಹೈಮಾಸ್ಕ್ ಮತ್ತು ₹50 ಲಕ್ಷ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು.

> "ಗ್ಯಾರಂಟಿ ಯೋಜನೆಗಳ ಜೊತೆಗೆ ಗ್ರಾಮೀಣ ಅಭಿವೃದ್ಧಿಗೂ ಸಮಾನ ಆದ್ಯತೆ ನೀಡುತ್ತಿರುವ ಶಾಸಕ ಜಿ.ಎಸ್. ಪಾಟೀಲರು ಜನತೆಯ ನಿಜವಾದ ಜನನಾಯಕರು."
> **– ಡಿ.ಡಿ. ಮೋರನಾಳ, ಮುಂಡರಗಿ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ**



ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಉತ್ತಮ ಶೈಕ್ಷಣಿಕ ವಾತಾವರಣ ಕಲ್ಪಿಸಲು ಸರ್ಕಾರಿ ಶಾಲೆಗಳ ನವೀಕರಣ ಹಾಗೂ ಸ್ಮಾರ್ಟ್ ತರಗತಿ ಕೊಠಡಿಗಳ ಅಭಿವೃದ್ಧಿಗೆ ಶಾಸಕ ಜಿ.ಎಸ್. ಪಾಟೀಲರು ವಿಶೇಷ ಆದ್ಯತೆ ನೀಡುತ್ತಿದ್ದಾರೆ ಎಂದು ಡಿ.ಡಿ. ಮೋರನಾಳ ಹೇಳಿದರು.

ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ ಮಿಥುನ ಜಿ. ಪಾಟೀಲ ಮಾತನಾಡಿ, ಶಾಸಕ ಜಿ.ಎಸ್. ಪಾಟೀಲರು ಕ್ಷೇತ್ರದಾದ್ಯಂತ ನೂರಾರು ಕೋಟಿ ರೂಪಾಯಿ ಅನುದಾನ ತಂದು ರಸ್ತೆ, ಶಿಕ್ಷಣ ಮತ್ತು ಮೂಲಸೌಕರ್ಯ ಅಭಿವೃದ್ಧಿಗೆ ಹೊಸ ವೇಗ ನೀಡಿದ್ದಾರೆ. ಕಾಮಗಾರಿಗಳ ಸಂದರ್ಭದಲ್ಲಿ ಗ್ರಾಮಸ್ಥರು ಸಹಕಾರ ನೀಡಿ ಗುಣಮಟ್ಟದ ಕಾಮಗಾರಿಗಳನ್ನು ಮಾಡಿಸಿಕೊಳ್ಳಬೇಕು ಎಂದು ಮನವಿ ಮಾಡಿದರು.

ರಾಜ್ಯದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅಭಿವೃದ್ಧಿ ಕಾರ್ಯಗಳಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದು, ಅದರ ಭಾಗವಾಗಿ ಗ್ರಾಮೀಣ ರಸ್ತೆ ಹಾಗೂ ಶಿಕ್ಷಣ ಕ್ಷೇತ್ರದ ಸುಧಾರಣೆಗೆ ಹೆಚ್ಚು ಒತ್ತು ನೀಡಲಾಗಿದೆ ಎಂದು ಹೇಳಿದರು.

ಮುಂಡರಗಿ ತಾಲೂಕು ಕಾರ್ಯನಿರ್ವಾಹಕ ಅಧಿಕಾರಿ ವಿಜಯಕುಮಾರ ಬೆಣ್ಣಿ ಹಾಗೂ ಸಮಾಜ ಕಲ್ಯಾಣಾಧಿಕಾರಿ ಉದಯಕುಮಾರ ಯಲಿವಾಳ ಮಾತನಾಡಿ, ಎಸ್.ಸಿ. ಕಾಲೋನಿಗಳ ಅಭಿವೃದ್ಧಿಗೆ ಸರ್ಕಾರದ ಯೋಜನೆಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಂಡು ಈ ಭಾಗದಲ್ಲಿ ಅಭಿವೃದ್ಧಿ ಕಾರ್ಯಗಳನ್ನು ಹಮ್ಮಿಕೊಳ್ಳುತ್ತಿರುವುದು ಶ್ಲಾಘನೀಯ ಎಂದರು.


> "ಶಾಸಕ ಜಿ.ಎಸ್. ಪಾಟೀಲರು ನೂರಾರು ಕೋಟಿ ರೂ. ಅನುದಾನ ತಂದು ರಸ್ತೆ, ಶಿಕ್ಷಣ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಹೊಸ ವೇಗ ನೀಡಿದ್ದಾರೆ. ಗ್ರಾಮಸ್ಥರು ಸಹಕಾರ ನೀಡಿದರೆ ಇನ್ನಷ್ಟು ಗುಣಮಟ್ಟದ ಕಾಮಗಾರಿಗಳು ಸಾಧ್ಯವಾಗುತ್ತವೆ."
> **– ಮಿಥುನ ಜಿ. ಪಾಟೀಲ, ರೋಣ ಗ್ಯಾರಂಟಿ ಸಮಿತಿ ಅಧ್ಯಕ್ಷ**

ಕಾರ್ಯಕ್ರಮದಲ್ಲಿ ಮುರಡಿ ತಾಂಡಾ ಗ್ರಾಪಂ ಅಧ್ಯಕ್ಷೆ ರತ್ನವ್ವ ಕಾರಬಾರಿ, ಉಪಾಧ್ಯಕ್ಷೆ ಲಲಿತಾ ಫವಾರ, ಸೋಮು ಹೈತಾಪೂರ, ವಿಶ್ವನಾಥ ಪಾಟೀಲ, ಸತ್ಯಪ್ಪ ಪೂಜಾರ, ಪ್ರಕಾಶ ಸಜ್ಜನ, ಗುರಣ್ಣ ಸಂಶಿ, ವಿರುಪಣ್ಣ ಮರಿಗೌಡರ, ಮಲ್ಲೇಶ ಪೂಜಾರ, ಫಾರುಕ್ ಅಬ್ದುಲ್ ಗೌಡ ಡೋಟ್ಯಾಳ, ವೀರೇಶ್ ರೋಣದ, ಮಂಜುನಾಥ ಹಿರೇಮಣಿ, ಮಲ್ಲಪ್ಪ ಕೊಡ್ಲಿ, ವಸಂತ ಮಾಳಗಿಮನಿ, ಹನಮಂತ ಕಡಕೋಳ, ಮಲ್ಲಪ್ಪ ಹಳ್ಳಿ, ಶಂಕರಗೌಡ್ರ ಹಿರೇಗೌಡರ, ಚೆನ್ನಪ್ಪ ಹಳ್ಳಿ, ಶಂಕರಗೌಡ ಪಾಟೀಲ, ದೇವಪ್ಪ ಕಟಗಿ, ಸುರೇಶ್ ಗೋಡಿ, ಮರಡೆಪ್ಪ ಹಳ್ಳಿ, ಮಲ್ಲಿಕಾರ್ಜುನ ಕೊಡ್ಲಿ, ಶೇಖರ ಫವಾರ, ಮನೋಜ ರಾಠೋಡ, ಉಪತಹಶೀಲ್ದಾರ ಎಸ್.ಎಸ್. ಬಿಚಾಲಿ, ಕಂದಾಯ ಅಧಿಕಾರಿ ಪ್ರಭು ಬಾಗಲಿ, ಪಿಡಿಒ ಲತಾ ಮಾನೆ, ಪಿಡಿಒ ಸಂತೋಷ ನಾಯಕ, ಗ್ರಾಪಂ ಸದಸ್ಯರು, ಮಹಿಳೆಯರು, ಯುವಕರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು.

# ಮಂಕುತಿಮ್ಮನ ಕಗ್ಗದ ಜೀವನ ಮೌಲ್ಯಗಳ ಅನಾವರಣ ಇಂದು

**■ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ವಿದ್ಯಾವರ್ಧಕ ಸಂಘ ಧಾರವಾಡ ಹಾಗೂ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಂಯುಕ್ತ ಆಶ್ರಯದಲ್ಲಿ ಮೇ 30ರಂದು ಸಂಜೆ 6.30ಕ್ಕೆ ನಗರದ ತೋಂಟದ ಸಿದ್ಧಲಿಂಗ ಶ್ರೀಗಳ ಕನ್ನಡ ಭವನದಲ್ಲಿರುವ ಕಸಾಪ ಕಾರ್ಯಾಲಯದಲ್ಲಿ "ಮಂಕುತಿಮ್ಮನ ಕಗ್ಗ" ಕುರಿತು ಉಪನ್ಯಾಸ ಹಾಗೂ ಸಂಗೀತ ಕಾರ್ಯಕ್ರಮ ಆಯೋಜಿಸಲಾಗಿದೆ.




ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದು, ಹೂವಿನಹಡಗಲಿಯ ದ್ವಾರಕೀಶರೆಡ್ಡಿ ಅವರು "ಮಂಕುತಿಮ್ಮನ ಕಗ್ಗ : ಜೀವನ ಮೌಲ್ಯಗಳು" ವಿಷಯದ ಕುರಿತು ಉಪನ್ಯಾಸ ನೀಡಲಿದ್ದಾರೆ.

ಕು. ಶ್ರದ್ಧಾ ಉಜ್ವಲ ಕಬಾಡಿ ಅವರಿಂದ ಸುಗಮ ಸಂಗೀತ ಕಾರ್ಯಕ್ರಮ ಜರುಗಲಿದ್ದು, ಕರ್ನಾಟಕ ವಿದ್ಯಾವರ್ಧಕ ಸಂಘದ ಜಿಲ್ಲಾ ಸಂಚಾಲಕ ಡಾ. ನಿಂಗು ಸೊಲಗಿ ಉಪಸ್ಥಿತರಿರುವರು.

ಸಾಹಿತ್ಯಾಭಿಮಾನಿಗಳು, ಸಾಹಿತಿಗಳು ಹಾಗೂ ಪರಿಷತ್ತಿನ ಸದಸ್ಯರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಶಂಕರ ಹಲಗತ್ತಿ, ಕಸಾಪದ ಕಿಶೋರಬಾಬು ನಾಗರಕಟ್ಟಿ, ದತ್ತಪ್ರಸನ್ನ ಪಾಟೀಲ ಹಾಗೂ ಡಿ.ಎಸ್. ಬಾಪುರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**"ಡಾ. ಸಂಗಮೇಶ ತಮ್ಮನಗೌಡ್ರ ಸಾಹಿತ್ಯ ಕೃಷಿ ಈ ಭಾಗದ ಹೆಮ್ಮೆ" ಎಂದ ಸಭಾಪತಿ ಬಸವರಾಜ ಹೊರಟ್ಟಿ**

# ಸಾಹಿತ್ಯ ಸಾಧನೆಗೆ ಹೊರಟ್ಟಿ ಮೆಚ್ಚುಗೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಕಳೆದ ಮೂರು–ನಾಲ್ಕು ದಶಕಗಳಿಂದ ಸಾಹಿತ್ಯ ಕ್ಷೇತ್ರದಲ್ಲಿ ನಿರಂತರ ಸೇವೆ ಸಲ್ಲಿಸುತ್ತಾ ನೂರಕ್ಕೂ ಹೆಚ್ಚು ಕೃತಿಗಳನ್ನು ರಚಿಸಿ ಪ್ರಕಟಿಸಿರುವ ಹಿರಿಯ ಸಾಹಿತಿ ಡಾ. ಸಂಗಮೇಶ ತಮ್ಮನಗೌಡ್ರ ಅವರ ಸಾಹಿತ್ಯ ಕೃಷಿ ಈ ಭಾಗಕ್ಕೆ ಹೆಮ್ಮೆಯ ಸಂಗತಿಯಾಗಿದೆ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಭಿಪ್ರಾಯಪಟ್ಟರು.

ಹಾವೇರಿ ನಗರದಲ್ಲಿ ಕರುನಾಡ ಸಾಹಿತ್ಯ ಮತ್ತು ಸಾಂಸ್ಕೃತಿಕ ವೇದಿಕೆ ವತಿಯಿಂದ ಸಾಹಿತಿ ಗಂಗಾಧರ ನಂದಿ ವೇದಿಕೆಯಲ್ಲಿ ನಡೆದ ಎರಡನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಡಾ. ಸಂಗಮೇಶ ತಮ್ಮನಗೌಡ್ರ ಅವರ 'ನನ್ನ ಸಾಹಿತ್ಯ ಪ್ರೇರಣೆಯ ನೆಲೆಗಳು' ಆತ್ಮಚರಿತ್ರೆ ಭಾಗ–4 ಕೃತಿಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.




> "13 ಸಾಹಿತ್ಯ ಪ್ರಕಾರಗಳಲ್ಲಿ 115 ಕೃತಿಗಳನ್ನು ರಚಿಸಿರುವ ಡಾ. ಸಂಗಮೇಶ ತಮ್ಮನಗೌಡ್ರ ಅವರ ಸಾಹಿತ್ಯ ಸೇವೆ ಈ ಭಾಗಕ್ಕೆ ಹೆಮ್ಮೆಯ ಸಂಗತಿ."
> **– ಬಸವರಾಜ ಹೊರಟ್ಟಿ, ವಿಧಾನ ಪರಿಷತ್ ಸಭಾಪತಿ**

ಡಾ. ತಮ್ಮನಗೌಡ್ರ ಅವರು ಗಳಗನಾಥರಂತೆ ಮನೆಮನೆಗೆ ಪುಸ್ತಕ ತಲುಪಿಸುವ ಕಾರ್ಯ ಮಾಡುತ್ತಿದ್ದು, ವರಕವಿ ಬೇಂದ್ರೆ ಹಾಗೂ ಚೆನ್ನವೀರ ಕಣವಿ ಅವರಂತೆ ಸಾಹಿತ್ಯ ನಿಷ್ಠೆಯ ವ್ಯಕ್ತಿಯಾಗಿದ್ದಾರೆ ಎಂದು ಪ್ರಶಂಸಿಸಿದರು.

ವಿವಿಧ ಕ್ಷೇತ್ರಗಳ 13 ಸಾಹಿತ್ಯ ಪ್ರಕಾರಗಳಲ್ಲಿ 115 ಕೃತಿಗಳನ್ನು ರಚಿಸಿರುವುದು ಹೆಮ್ಮೆಯ ಸಂಗತಿಯಾಗಿದೆ. ಅವರ ಸಾಹಿತ್ಯ ಸೇವೆ ಇದೇ ರೀತಿಯಲ್ಲಿ ಮುಂದುವರೆಯಲಿ. ಇನ್ನಷ್ಟು ಸಾಮಾಜಿಕ ಚಿಂತನೆಯ ಕೃತಿಗಳು ಹೊರಬರಲಿ ಎಂದು ಹಾರೈಸಿದರು.

ಸಮ್ಮೇಳನಾಧ್ಯಕ್ಷರಾದ ಬಿ.ಎಂ. ಓಂಕಾರಣ್ಣವರ, ಸಂಸ್ಥಾಪಕ ರಾಜ್ಯಾಧ್ಯಕ್ಷ ಎಸ್.ಡಿ. ಮುಡೆಣ್ಣವರ, ಎಸ್.ಎಲ್. ಕಾಡದೇವರಮಠ, ಡಾ. ಜಿ.ಎಸ್. ಇಮ್ರಾಪುರ, ಜಿ.ಎಂ. ಮುಂದಿನಮನಿ, ಕಾಸರಗೋಡಿನ ಕನ್ನಡ ಭವನ ಗ್ರಂಥಾಲಯದ ಸಂಸ್ಥಾಪಕ ಡಾ. ವಾಮನರಾವ್ ಬೇಕಲ್, ಪರಮೇಶ್ವರಪ್ಪ ಮೇಗಳಮನಿ, ಲಿಂಗಯ್ಯ ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಅಕ್ಕಮಹಾದೇವಿ ಹಾನಗಲ್, ನಾಗರಾಜ ನಡುವಿನಮಠ, ಅನಿತಾ ಅಶೋಕ ಉಪಲಿ ಹಾಗೂ ಚಂಪಾ ಹುಣಸಿಕಟ್ಟಿ ಕಾರ್ಯಕ್ರಮ ನಿರ್ವಹಿಸಿದರು.

**"ಮಕ್ಕಳಿಗೆ ಧಾರ್ಮಿಕ ಮೌಲ್ಯ, ನಡೆ–ನುಡಿ ಕಲಿಸುವ ಜವಾಬ್ದಾರಿ ಪಾಲಕರ ಮೇಲಿದೆ" – ಮುಕ್ತಿಮಂದಿರ ಶ್ರೀ**

# ಸಾಧನೆಯ ಹಿಂದೆ ಸಂಸ್ಕಾರದ ಶಕ್ತಿ ಇರಬೇಕು

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಇಂದಿನ ಮಕ್ಕಳಿಗೆ ಕೇವಲ ಶಿಕ್ಷಣವಷ್ಟೇ ಅಲ್ಲದೆ ಧಾರ್ಮಿಕ ಶ್ರದ್ಧೆ, ಸಂಸ್ಕಾರ, ನಡೆ–ನುಡಿ ಹಾಗೂ ಆಚಾರ–ವಿಚಾರಗಳನ್ನು ಕಲಿಸುವ ಗುರುತರ ಜವಾಬ್ದಾರಿ ಪಾಲಕರ ಮೇಲಿದೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಪಟ್ಟಾಧ್ಯಕ್ಷರಾದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಪಟ್ಟಣದ ಹಳ್ಳದಕೇರಿಯ ಕರೆವಾಡಿಮಠದಲ್ಲಿ ತಾಲೂಕು ಜಂಗಮ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಗುರುವಾರ ಹಮ್ಮಿಕೊಂಡಿದ್ದ ಸಾಧಕರ ಸನ್ಮಾನ ಹಾಗೂ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿಯಲ್ಲಿ ಶೇ.90 ಕ್ಕೂ ಅಧಿಕ ಅಂಕ ಗಳಿಸಿದ ಜಂಗಮ ಸಮಾಜದ ಪ್ರತಿಭಾವಂತ ವಿದ್ಯಾರ್ಥಿಗಳ ಸನ್ಮಾನ ಸಮಾರಂಭದ ಸಾನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.




> "ಶಿಕ್ಷಣದ ಜೊತೆಗೆ ಧಾರ್ಮಿಕ ಶ್ರದ್ಧೆ, ಸಂಸ್ಕಾರ ಹಾಗೂ ಆಚಾರ–ವಿಚಾರಗಳನ್ನು ಮಕ್ಕಳಿಗೆ ಕಲಿಸುವ ಜವಾಬ್ದಾರಿ ಪಾಲಕರ ಮೇಲಿದೆ."
> **– ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು**

ಜಂಗಮ ಸಮಾಜವು ಸಮಾಜಕ್ಕೆ ಸಂಸ್ಕಾರ ನೀಡುವ ಪ್ರಮುಖ ಸಮುದಾಯವಾಗಿದ್ದು, ಇತರೆ ಸಮಾಜಗಳಿಗೆ ಮಾದರಿಯಾಗಬೇಕು. ಆದಿ ಅನಾದಿಕಾಲದಿಂದಲೂ ಜಂಗಮರು ಧಾರ್ಮಿಕ ಪದ್ಧತಿಗಳನ್ನು ಅಳವಡಿಸಿಕೊಂಡು ಬಂದಿದ್ದು, ಅವುಗಳನ್ನು ಮುಂದಿನ ಪೀಳಿಗೆಗೆ ಕಲಿಸುವ ಜೊತೆಗೆ ಸಮಾಜಕ್ಕೆ ಉತ್ತಮ ಸಂದೇಶಗಳನ್ನು ನೀಡುವ ಕಾರ್ಯ ಮಾಡಬೇಕು ಎಂದು ಶ್ರೀಗಳು ಹೇಳಿದರು.

ಸಾಧಕರಿಗೆ ಹಾಗೂ ಹೆಚ್ಚು ಅಂಕ ಗಳಿಸಿದ ವಿದ್ಯಾರ್ಥಿಗಳಿಗೆ ಸನ್ಮಾನಿಸುವ ಮೂಲಕ ಮಕ್ಕಳಿಗೆ ಪ್ರೋತ್ಸಾಹ ನೀಡುತ್ತಿರುವುದು ಶ್ಲಾಘನೀಯ ಕಾರ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ನರಸಾಪುರ ಹಾಗೂ ಕದಂಪುರ ಮಠದ ಶ್ರೀ ವೀರಭದ್ರ ಶಿವಾಚಾರ್ಯರು ಮಾತನಾಡಿ, ಮಕ್ಕಳಲ್ಲಿ ಸಾಧನೆಯ ಮನೋಭಾವ ಬೆಳೆಸಬೇಕು. ಅದಕ್ಕಾಗಿ ಗುರಿ ಇಟ್ಟು ಶ್ರಮಿಸುವ ಮನಸ್ಥಿತಿ ಅಗತ್ಯವಿದ್ದು, ಪಾಲಕರು ಮಕ್ಕಳಿಗೆ ವಿದ್ಯಾಭ್ಯಾಸದ ಜೊತೆಗೆ ಉತ್ತಮ ಸಂಸ್ಕಾರ ಕಲಿಸಬೇಕು ಎಂದು ಹೇಳಿದರು.

ಕರೆವಾಡಿಮಠದ ಶ್ರೀ ಮಳೆಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಕರೆವಾಡಿಮಠದ ನಿಯೋಜಿತ ಉತ್ತರಾಧಿಕಾರಿಗಳಾದ ಮಂಜುನಾಥ ದೇವರು ಆಶೀರ್ವಚನ ನೀಡಿದರು.

ಮಾಜಿ ಶಾಸಕ ಜಿ.ಎಸ್. ಗಡ್ಡದೇವರಮಠ ಕಾರ್ಯಕ್ರಮ ಉದ್ಘಾಟಿಸಿದರು. ಅಖಿಲ ಭಾರತೀಯ ಜಂಗಮ ಸೇವಾ ಸಮಿತಿ ಜಿಲ್ಲಾ ಉಪಾಧ್ಯಕ್ಷ ಕೆ.ವಿ. ಹಿರೇಮಠ ವೇದಿಕೆಯಲ್ಲಿ ಉಪಸ್ಥಿತರಿದ್ದರು.

ವೀರಭದ್ರಯ್ಯ ಹಿರೇಮಠ ಪ್ರಾಸ್ತಾವಿಕವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಶಿರಹಟ್ಟಿ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಶರಣಬಸಪ್ಪ ಪಾಟೀಲ ಹಾಗೂ ಲಕ್ಷ್ಮೇಶ್ವರ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ನಿರ್ದೇಶಕಿ ಸುನಂದಾ ಹಿರೇಮಠ ಅವರನ್ನು ಸನ್ಮಾನಿಸಲಾಯಿತು.

ಶಂಕ್ರಯ್ಯ ಪೂಜಾರ ಹಾಗೂ ಮುರುಗೇಂದ್ರಯ್ಯ ಹಿರೇಮಠ ವೇದಘೋಷಣೆ ಮಾಡಿದರು.

ಕಾರ್ಯಕ್ರಮದಲ್ಲಿ ಮಹೇಶ್ ಲಿಂಬಯ್ಯಸ್ವಾಮಿಮಠ, ಸಿ.ಆರ್. ಲಕ್ಕುಂಡಿಮಠ, ಶಿವಯೋಗಿ ಗಡ್ಡದೇವರಮಠ, ಪಂಚಯ್ಯ ಸಾಲಿಮಠ, ರುದ್ರಮುನಿಸ್ವಾಮಿ ಘಂಟಾಮಠ, ಎಸ್.ಪಿ. ಸಭಾವಡೆಮಠ, ನೀಲಕಂಠಯ್ಯ ಹಿರೇಮಠ, ಶಿವರಾಜ ಕರೆವಾಡಿಮಠ, ಜಿಲ್ಲಾ ಅಖಿಲ ಭಾರತೀಯ ಜಂಗಮ ಸೇವಾ ಸಮಿತಿಯ ವೀರಯ್ಯ ಹೊಸಮಠ, ತೋಟಪಯ್ಯ ಗುಡ್ಡಿಮಠ, ಕುಮಾರಸ್ವಾಮಿ ಹಿರೇಮಠ, ಸಂತೋಷ ಹಿರೇಮಠ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನಾಳೆ ಉಚಿತ ಆರೋಗ್ಯ ಕಾರ್ಡ್ ವಿತರಣೆ

**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಹಿರಿಯ ನಾಗರಿಕರ ಆರೋಗ್ಯ ಭದ್ರತೆಗೆ ಮತ್ತೊಂದು ಮಹತ್ವದ ಕಾರ್ಯಕ್ರಮವಾಗಿ, ನರೇಗಲ್ಲ ಹಿರಿಯ ನಾಗರಿಕರ ಕ್ಷೇಮಾಭಿವೃದ್ಧಿ ಸಂಘ, ನಿವೃತ್ತ ನೌಕರರ ಸಂಘ, ಬೀಚಿ ಬಳಗ ಹಾಗೂ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರಿಗೆ ಗದಗದ ಸಂಗಮೇಶ್ವರ ಆಸ್ಪತ್ರೆಯಿಂದ ಆರೋಗ್ಯ ಕಾರ್ಡ್‌ಗಳನ್ನು ವಿತರಿಸುವ ಕಾರ್ಯಕ್ರಮ ಮೇ 31ರಂದು ನಡೆಯಲಿದೆ.

ಪಟ್ಟಣದ ಹಿರೇಮಠ ಸಭಾಭವನದಲ್ಲಿ ರವಿವಾರ ಬೆಳಿಗ್ಗೆ 10 ಗಂಟೆಗೆ ಕಾರ್ಯಕ್ರಮ ಆಯೋಜಿಸಲಾಗಿದ್ದು, ಹಿರೇಮಠದ ಷ.ಬ್ರ. ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯರು ದಿವ್ಯ ಸಾನಿಧ್ಯ ವಹಿಸಲಿದ್ದಾರೆ. ನ್ಯಾಯವಾದಿ ವೀರಣ್ಣ ದಿಂಡೂರ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಹಿರಿಯ ವೈದ್ಯ ಡಾ. ಕೆ.ಬಿ. ಧನ್ನೂರ ಸಮಾರಂಭವನ್ನು ಉದ್ಘಾಟಿಸಲಿದ್ದು, ಗದಗದ ಸಂಗಮೇಶ್ವರ ಆಸ್ಪತ್ರೆಯ ಮುಖ್ಯಸ್ಥ ಡಾ. ಪ್ರಶಾಂತ ಧನ್ನೂರ ಆರೋಗ್ಯ ಕಾರ್ಡ್‌ಗಳನ್ನು ವಿತರಿಸಲಿದ್ದಾರೆ.

ಕಾರ್ಯಕ್ರಮದಲ್ಲಿ ಸಂಗಮೇಶ್ವರ ಆಸ್ಪತ್ರೆಯ ಸ್ತ್ರೀರೋಗ ತಜ್ಞೆ ಡಾ. ಅನ್ನಪೂರ್ಣಾ ಧನ್ನೂರ, ನಿವೃತ್ತ ಮುಖ್ಯ ಶಿಕ್ಷಕ ಗಂಗಾಧರಗೌಡ ಗೌಡರ, ನಿವೃತ್ತ ನೌಕರರ ಸಂಘದ ಅಧ್ಯಕ್ಷ ದೊಡ್ಡಯ್ಯ ಅರವಟಗಿಮಠ, ಬೀಚಿ ಬಳಗದ ಅಧ್ಯಕ್ಷ ಶಿವಯೋಗಿ ಜಕ್ಕಲಿ ಹಾಗೂ ನರೇಗಲ್ಲ ಹೋಬಳಿ ಕಾನಿಪ ಅಧ್ಯಕ್ಷ ಆದರ್ಶ ಕುಲಕರ್ಣಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಈ ಕುರಿತು ಬೀಚಿ ಬಳಗದ ಸಂಚಾಲಕ ಜೆ.ಎ. ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಡಿಕೆಶಿಗೆ ಸಿಎಂ ಯೋಗ ಲಿಂ. ವೀರಗಂಗಾಧರರ ಆಶೀರ್ವಾದದ ಫಲ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಮುಕ್ತಿಮಂದಿರ ಮಹರ್ಷಿ ಲಿಂ. ಜಗದ್ಗುರು ವೀರಗಂಗಾಧರ ಭಗವತ್ಪಾದರ ಬಗ್ಗೆ ಅಪಾರ ಭಕ್ತಿಯನ್ನು ಹೊಂದಿದ್ದು, ಅಧಿಕಾರದ ಗದ್ದುಗೆ ಏರುವ ಸಂದರ್ಭದಲ್ಲಿ ಲಿಂ. ವೀರಗಂಗಾಧರ ಮಹರ್ಷಿಗಳ ಹೆಸರಿನಲ್ಲಿ ಪ್ರಮಾಣವಚನ ಸ್ವೀಕರಿಸಿದ ಏಕೈಕ ವ್ಯಕ್ತಿಯಾಗಿದ್ದಾರೆ ಎಂದು ಮುಕ್ತಿಮಂದಿರ ಧರ್ಮಕ್ಷೇತ್ರದ ಶ್ರೀ ವಿಮಲರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದ್ದಾರೆ.

ಕಳೆದ ಎಪ್ರಿಲ್ 19ರಂದು ಡಿಕೆಶಿ ಮುಕ್ತಿಮಂದಿರ ಕ್ಷೇತ್ರಕ್ಕೆ ಆಗಮಿಸಿ ಸುಮಾರು ಎರಡು ಗಂಟೆಗಳ ಕಾಲ ಲಿಂ. ಶ್ರೀಗಳ ಗದ್ದುಗೆಗೆ ಪೂಜೆ, ಮಂಗಳಾರತಿ ಹಾಗೂ ಧ್ಯಾನ ನೆರವೇರಿಸಿ ಮನಃಪೂರ್ವಕವಾಗಿ ಬೇಡಿಕೆ ಸಲ್ಲಿಸಿದ್ದರು ಎಂದು ಅವರು ಹೇಳಿದ್ದಾರೆ.

ಲಿಂ. ಶ್ರೀಗಳ ಪವಾಡದ ಅರಿವು ಡಿಕೆಶಿ ಅವರಿಗೆ ಇದ್ದು, ತಮ್ಮ ಸಂಕಲ್ಪ ಸಿದ್ಧಿಯಾಗಲೆಂದು ವಿಶೇಷ ಪೂಜೆ ಸಲ್ಲಿಸಿದ್ದರು. ಅಂದು "ಲಿಂ. ಶ್ರೀಗಳ ಆಶೀರ್ವಾದದಿಂದ ಅವರು ಅಂದುಕೊಂಡ ಹುದ್ದೆ ಶೀಘ್ರದಲ್ಲೇ ದೊರೆಯಲಿದೆ" ಎಂದು ಆಶೀರ್ವಾದ ಮಾಡಿ ಕಳುಹಿಸಿದ್ದಾಗಿ ಶ್ರೀಗಳು ತಿಳಿಸಿದ್ದಾರೆ.

ಡಿ.ಕೆ. ಶಿವಕುಮಾರ ಅವರು ರಾಜ್ಯವನ್ನು ಯಶಸ್ವಿಯಾಗಿ ಮುನ್ನಡೆಸುವ ಸಾಮರ್ಥ್ಯ ಹೊಂದಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸಹ ಅಧಿಕಾರ ಬಿಟ್ಟು ಕೊಡುವಲ್ಲಿ ಪ್ರಬುದ್ಧತೆ ಮೆರೆದಿದ್ದಾರೆ.

ಎಲ್ಲ ವರ್ಗಗಳನ್ನು ಸಮನ್ವಯದಿಂದ ಕೊಂಡೊಯ್ಯುವ ಶಕ್ತಿಯನ್ನು ಲಿಂ. ಜಗದ್ಗುರು ವೀರಗಂಗಾಧರರು ಡಿಕೆಶಿಗೆ ಕರುಣಿಸಲಿ ಎಂದು ಶ್ರೀಗಳು ಆಶಿಸಿದ್ದಾರೆ.

### ಸೋಮೇಶ್ವರ ದೇವಸ್ಥಾನ ಬಳಿ ಮಾಂಸ ಮಾರಾಟಕ್ಕೆ ಹಿಂದೂ ಸಂಘಟನೆಗಳ ಗರಂ!

# ದೇವಸ್ಥಾನ ಸುತ್ತ ಮಾಂಸ ಮಾರಾಟ ನಿಲ್ಲಿಸಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಹಲವಾರು ವರ್ಷಗಳಿಂದ ಲಕ್ಷ್ಮೇಶ್ವರ ಪಟ್ಟಣದ ಶ್ರೀ ಸೋಮೇಶ್ವರ ದೇವಸ್ಥಾನದ ಹಿಂಭಾಗದಲ್ಲಿ ನಡೆಯುತ್ತಿರುವ ಚಿಕನ್, ಮೀನು, ಕುರಿ ಹಾಗೂ ಮಾಂಸ ಮಾರಾಟ ಅಂಗಡಿಗಳನ್ನು ಕೂಡಲೇ ಸ್ಥಳಾಂತರಿಸಬೇಕು. ಪುರಸಭೆ ಜಾಗದಲ್ಲಿ ಅಕ್ರಮವಾಗಿ ನಡೆಯುತ್ತಿರುವ ಕಸಾಯಿಖಾನೆಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿ ಶುಕ್ರವಾರ ಶ್ರೀರಾಮ್ ಸೇನೆ ಹಾಗೂ ವಿವಿಧ ಹಿಂದೂ ಸಂಘಟನೆಗಳ ಕಾರ್ಯಕರ್ತರು ಪುರಸಭೆ ಮುಖ್ಯಾಧಿಕಾರಿ ಪರಶುರಾಮ ಗಡದಾರಿ ಅವರಿಗೆ ಮನವಿ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಶ್ರೀರಾಮ್ ಸೇನೆ ತಾಲೂಕು ಅಧ್ಯಕ್ಷ ಈರಣ್ಣ ಪೂಜಾರ ಹಾಗೂ ಹಿಂದೂ ಯುವ ಮುಖಂಡರಾದ ಗಂಗಾಧರ ಮೆಣಸಿನಕಾಯಿ, ಸೋಮೇಶ ಉಪನಾಳ, ಮಂಜುನಾಥ ಹೊಗೆಸೊಪ್ಪಿನ ಅವರು, ದೇವಸ್ಥಾನದ ಹಿಂಭಾಗದಲ್ಲಿ ದಶಕಗಳಿಂದ ಮಾಂಸ ಮಾರಾಟ ಅಂಗಡಿಗಳು ಹಾಗೂ ಅಕ್ರಮ ಕಸಾಯಿಖಾನೆಗಳು ನಡೆಯುತ್ತಿರುವುದು ಧಾರ್ಮಿಕ ಭಾವನೆಗೆ ಧಕ್ಕೆ ಉಂಟುಮಾಡುತ್ತಿದೆ ಎಂದು ಆರೋಪಿಸಿದರು.

> "ಒಂದು ತಿಂಗಳೊಳಗೆ ಮಾಂಸ ಅಂಗಡಿಗಳನ್ನು ಸ್ಥಳಾಂತರಿಸದಿದ್ದರೆ ಪುರಸಭೆ ಎದುರು ಸಮಸ್ತ ಹಿಂದೂ ಸಂಘಟನೆಗಳಿಂದ ಉಗ್ರ ಹೋರಾಟ ಹಮ್ಮಿಕೊಳ್ಳಲಾಗುವುದು."
> **– ಈರಣ್ಣ ಪೂಜಾರ, ಶ್ರೀರಾಮ್ ಸೇನೆ ತಾಲೂಕು ಅಧ್ಯಕ್ಷ**




ದೇವಸ್ಥಾನಕ್ಕೆ ಸಮೀಪದಲ್ಲೇ ಮಾಂಸ ಸಾಗಣೆ ನಡೆಯುತ್ತಿದ್ದು, ಈ ಕುರಿತು ಹಲವು ವರ್ಷಗಳಿಂದ ವಿವಿಧ ಸಂಘಟನೆಗಳು ಹಾಗೂ ಸಾರ್ವಜನಿಕರು ಮನವಿ ಸಲ್ಲಿಸಿದರೂ ಅಧಿಕಾರಿಗಳು ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

"ಪುರಸಭೆಯವರು ಮಾಂಸ ಮಾರಾಟಗಾರರಿಗೆ ಭಯಪಡುತ್ತಿದ್ದಾರೆ. ಅಧಿಕಾರಿಗಳು ಮಾಂಸ ವ್ಯಾಪಾರಿಗಳೊಂದಿಗೆ ಶಾಮೀಲಾಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದೆ" ಎಂದು ಅವರು ಆರೋಪಿಸಿದರು.

ಕಳೆದ ನಾಲ್ಕು ವರ್ಷಗಳ ಹಿಂದೆ ಅಂದಿನ ಜಿಲ್ಲಾಧಿಕಾರಿಗಳು ಅಂಗಡಿಗಳನ್ನು ತೆರವುಗೊಳಿಸಲು ಆದೇಶ ನೀಡಿದ್ದರೂ, ಇದುವರೆಗೆ ಕಾರ್ಯರೂಪಕ್ಕೆ ಬಂದಿಲ್ಲ ಎಂದು ಆರೋಪಿಸಿದ ಅವರು, ಇನ್ನೂ ಒಂದು ತಿಂಗಳೊಳಗೆ ಅಂಗಡಿಗಳನ್ನು ಸ್ಥಳಾಂತರಿಸದಿದ್ದರೆ ಪುರಸಭೆ ಎದುರು ಸಮಸ್ತ ಹಿಂದೂ ಸಂಘಟನೆಗಳಿಂದ ತೆರವುಗೊಳಿಸುವವರೆಗೆ ಹೋರಾಟ ಹಮ್ಮಿಕೊಳ್ಳಲಾಗುವುದು ಎಂದು ಎಚ್ಚರಿಸಿದರು.

ಬಜಾರ್ ವ್ಯಾಪಾರಸ್ಥರ ಸಂಘದ ಅಧ್ಯಕ್ಷ ಬಸವೇಶ ಮಹಾಂತಶೆಟ್ಟರ, ವರ್ತಕರಾದ ಚಂಬಣ್ಣ ಬಾಳಿಕಾಯಿ ಹಾಗೂ ವಿಜಯ ಹತ್ತಿಕಾಳ ಮಾತನಾಡಿದರು.

ಈ ಸಂದರ್ಭದಲ್ಲಿ ಸೋಮೇಶ್ವರ ದೇವಸ್ಥಾನ ಭಕ್ತರ ಸೇವಾ ಟ್ರಸ್ಟ್ ಕಮಿಟಿ ಅಧ್ಯಕ್ಷ ಗುರುರಾಜ ಪಾಟೀಲ್ ಕುಲಕರ್ಣಿ, ದುಂಡೇಶ ಕೊಟಗಿ, ಥಾವರಪ್ಪ ಲಮಾಣಿ, ರಾಜು ಅಂದಲಗಿ, ಬಸವರಾಜ ಚಕ್ರಸಾಲಿ, ಶಿವಣ್ಣ ಲಮಾಣಿ, ಪುಂಡಲೀಕ ಲಮಾಣಿ, ಪ್ರವೀಣ ಬೋಮಲೆ, ವಿಜಯ ಕುಂಬಾರ, ಗಿರೀಶ ಚೌರಡ್ಡಿ, ಮಲ್ಲಿಕಾರ್ಜುನ ನೀರಾಲೋಟ, ಶಕ್ತಿ ಕತ್ತಿ, ವಿಶಾಲ ಬಟಗುರ್ಕಿ, ಅಮಿತ ಗುಡಗೇರಿ, ಮಹಾಂತೇಶ ರಗಟಿ, ಮಹಾದೇವಪ್ಪ ಅಣ್ಣಿಗೇರಿ, ಹನುಮಂತ ರಾಮಗೇರಿ, ಸಂತೋಷ ಬೋಮಲೆ, ಸುಮಂಗಲಾ ಕುಂಬಾರ, ಗೀತಾ ಬಡಿಗೇರ, ಶೋಭಾ ಇಟಗಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

**ಒಂದು ತಿಂಗಳ ಗಡುವು!**

- ಸೋಮೇಶ್ವರ ದೇವಸ್ಥಾನ ಹಿಂಭಾಗದಲ್ಲೇ ಮಾಂಸ ಅಂಗಡಿಗಳ ಕಾರ್ಯಾಚರಣೆ
- ಅಕ್ರಮ ಕಸಾಯಿಖಾನೆಗಳ ವಿರುದ್ಧ ಕ್ರಮಕ್ಕೆ ಆಗ್ರಹ
- ನಾಲ್ಕು ವರ್ಷಗಳ ಹಿಂದೆ ಜಿಲ್ಲಾಧಿಕಾರಿಗಳಿಂದ ತೆರವು ಆದೇಶ
- ಇನ್ನೂ ತೆರವು ಕಾರ್ಯವಾಗಿಲ್ಲವೆಂದು ಆರೋಪ
- "ಅಧಿಕಾರಿಗಳು ಮಾಂಸ ವ್ಯಾಪಾರಿಗಳ ಜೊತೆ ಶಾಮೀಲು" ಎಂದು ಟೀಕೆ
- ಒಂದು ತಿಂಗಳಲ್ಲಿ ಕ್ರಮ ಕೈಗೊಳ್ಳದಿದ್ದರೆ ಉಗ್ರ ಹೋರಾಟದ ಎಚ್ಚರಿಕೆ

# ಗದಗ ಜಿಲ್ಲಾಧ್ಯಕ್ಷರಾಗಿ ಕುಮಾರ ಎಸ್. ತಳವಾರ ನೇಮಕ



■ವಿಜಯಸಾಕ್ಷಿ ಸುದ್ದಿ, ಗದಗ

ಹಾವೇರಿ ಕರುನಾಡ ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಬಳಗ ರಾಜ್ಯ ಸಮಿತಿ, ಬೆಂಗಳೂರು ಇವರ ಆಶ್ರಯದಲ್ಲಿ ಹಾವೇರಿಯಲ್ಲಿ ನಡೆದ 2ನೇ ರಾಜ್ಯಮಟ್ಟದ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಕುಮಾರ ಎಸ್. ತಳವಾರ ಅವರನ್ನು ಕರ್ನಾಟಕ ಕನ್ನಡ ಸಾಹಿತ್ಯ ಹಾಗೂ ಸಾಂಸ್ಕೃತಿಕ ಬಳಗದ ಗದಗ ಜಿಲ್ಲಾಧ್ಯಕ್ಷರನ್ನಾಗಿ ನೇಮಕ ಮಾಡಲಾಯಿತು.

ಸಮ್ಮೇಳನದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಕನಕದಾಸ ಶಿಕ್ಷಣ ಸಮಿತಿ, ಗದಗ ಇದರ ಚೇರ್ಮನ್, ಚಲನಚಿತ್ರ ನಿರ್ಮಾಪಕರು ಹಾಗೂ ಶಿಕ್ಷಣ ಪ್ರೇಮಿಗಳಾದ ರವೀಂದ್ರನಾಥ್ ಬಿ. ದಂಡಿನ ಮಾತನಾಡಿದರು.

ಈ ಸಂದರ್ಭದಲ್ಲಿ ಕುಮಾರ ಎಸ್. ತಳವಾರ ಅವರಿಗೆ ನೇಮಕಾತಿ ಪ್ರಮಾಣ ಪತ್ರ ವಿತರಿಸಲಾಯಿತು.

ಸಮ್ಮೇಳನದ ಅಧ್ಯಕ್ಷತೆಯನ್ನು ಜಿ.ಎಂ. ಓಂಕಾರನವರ ವಹಿಸಿದ್ದರು. ವೇದಿಕೆಯಲ್ಲಿ ರಾಮಣ್ಣ ಪಿ. ಕುರಡಗಿ, ಎಸ್.ಎ. ಕಮ್ಮಾರ, ಸಂಸ್ಥೆಯ ಸಂಸ್ಥಾಪಕ ರಾಜ್ಯಾಧ್ಯಕ್ಷ ಎಸ್.ಡಿ. ಮುಡೆಣ್ಣವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

### ಕ್ರಿಯೇಟಿವ್ ಕ್ಲಾಸಸ್ ಬೇಸಿಗೆ ಶಿಬಿರ ಸಮಾರೋಪದಲ್ಲಿ ಸೈಯದ್ ಅಭಿಮತ

# ಶಿಸ್ತು, ಸಮಯ ಪ್ರಜ್ಞೆ ವಿದ್ಯಾರ್ಥಿಗಳಿಗೆ ಅಗತ್ಯ

■ವಿಜಯಸಾಕ್ಷಿ ಸುದ್ದಿ, ಅಣ್ಣಿಗೇರಿ

ಸ್ಥಳೀಯ ಕ್ರಿಯೇಟಿವ್ ಕ್ಲಾಸಸ್ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಬೇಸಿಗೆ ಶಿಬಿರದ ಸಮಾರೋಪ ಸಮಾರಂಭವು ಗುರುವಾರ ನಡೆಯಿತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಗ್ರಾಮೀಣ ಇಂಜಿನಿಯರಿಂಗ್ ಕಾಲೇಜಿನ ಗಣಿತ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ. ಮಹಮ್ಮದಸಾದಿಕ್ ಸೈಯದ್, ವಿದ್ಯಾರ್ಥಿಗಳು ಜೀವನದಲ್ಲಿ ಶಿಸ್ತು, ಸಮಯ ಪ್ರಜ್ಞೆ ಹಾಗೂ ಸತತ ಪರಿಶ್ರಮವನ್ನು ರೂಢಿಸಿಕೊಳ್ಳಬೇಕು ಎಂದು ಹೇಳಿದರು.




ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಗಾಯಕ ಹಾಗೂ ಅಣ್ಣಿಗೇರಿ ಪೊಲೀಸ್ ಪೇದೆ ಮಹೇಶ್ ಹೂಲಿ ಸುಮಧುರ ಗೀತೆಗಳ ಮೂಲಕ ವಿದ್ಯಾರ್ಥಿಗಳನ್ನು ರಂಜಿಸಿದರು.

ಅತಿಥಿಯಾಗಿ ಪಾಲ್ಗೊಂಡಿದ್ದ ಸಾತ್ವಿಕ ಹರ್ಲಾಪೂರ ವಿದ್ಯಾರ್ಥಿಗಳು ಓದಿನ ಕಡೆ ಹೆಚ್ಚಿನ ಗಮನ ಹರಿಸಿ ಓದುವ ಹವ್ಯಾಸ ಬೆಳೆಸಿಕೊಳ್ಳಬೇಕು ಎಂದು ಹೇಳಿದರು.

ನಿಶಾದ ಘೂಡುನಾಯ್ಕರ್ ಮಾತನಾಡಿ, ವಿದ್ಯಾರ್ಥಿಗಳು ಉತ್ತಮ ವ್ಯಕ್ತಿತ್ವ ಬೆಳೆಸಿಕೊಂಡು ಹೆತ್ತವರನ್ನು ಗೌರವಿಸಬೇಕು ಎಂದು ಸಲಹೆ ನೀಡಿದರು.


ಕ್ರಿಯೇಟಿವ್ ಕ್ಲಾಸಸ್ ಸಂಯೋಜಕರಾದ ಅಶೋಕ ಚವ್ಹಾಣ ಮಾತನಾಡಿ, ವಿದ್ಯಾರ್ಥಿಗಳು ದೇಶದ ಉತ್ತಮ ಪ್ರಜೆಗಳಾಗಬೇಕು ಎಂದರು. ಮತ್ತೊಬ್ಬ ಸಂಯೋಜಕ ಅಯೂಬಖಾನ್ ಹಾಶಿಮನವರ, ವಿದ್ಯಾರ್ಥಿಗಳು ಮೊಬೈಲ್ ಬಳಕೆಯನ್ನು ಕಡಿಮೆ ಮಾಡಿ ಓದಿನ ಕಡೆ ಗಮನ ಹರಿಸಬೇಕು ಎಂದು ಹೇಳಿದರು.

ಬೇಸಿಗೆ ಶಿಬಿರದ ಮುಖ್ಯಸ್ಥೆ ಸವಿತಾ ಕಮ್ಮಾರ ಮಾತನಾಡಿ, ವಿದ್ಯಾರ್ಥಿಗಳ ಸರ್ವತೋಮುಖ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ಅಭಿಷೇಕ್ ಕಿರೇಸೂರ, ಗಗನ ಬಡಿಗೇರ ಹಾಗೂ ಅಭಿಷೇಕ್ ಪಾಟೀಲ್ ಅವರನ್ನು ಸನ್ಮಾನಿಸಲಾಯಿತು. ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಬಹುಮಾನ ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಪಾಲಕರು ಹಾಗೂ ಶಿಕ್ಷಕರು ಭಾಗವಹಿಸಿದ್ದರು.

# ಹಾಡಹಗಲೇ ಬೈಕ್ ಎಗರಿಸಿದ ಕಳ್ಳ! ಸಿಸಿ ಟಿವಿಯಲ್ಲಿ ಕಳ್ಳನ ಕೈಚಳಕ ಸೆರೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹೃದಯಭಾಗದಲ್ಲೇ ಹಾಡಹಗಲೇ ಖದೀಮನೊಬ್ಬ ಕ್ಷಣಾರ್ಧದಲ್ಲಿ ಬೈಕ್ ಕದ್ದು ಪರಾರಿಯಾದ ಘಟನೆ ಗದಗದಲ್ಲಿ ನಡೆದಿದೆ.

ನಗರದ ಕೆ.ಸಿ. ರಾಣಿ ರಸ್ತೆಯಲ್ಲಿ ನಡೆದ ಈ ಕಳ್ಳತನ ಪ್ರಕರಣ ಸಾರ್ವಜನಿಕರಲ್ಲಿ ಆತಂಕ ಹುಟ್ಟಿಸಿದ್ದು, ಕಳ್ಳನ ಚಾಕಚಕ್ಯತೆ ಸಿಸಿ ಟಿವಿಯಲ್ಲಿ ಸ್ಪಷ್ಟವಾಗಿ ಸೆರೆಯಾಗಿದೆ.

ಗಣೇಶ್ ಹುಬ್ಬಳ್ಳಿ ಎಂಬುವರಿಗೆ ಸೇರಿದ KA-26 EB-9527 ನಂಬರ್‌ನ ದ್ವಿಚಕ್ರ ವಾಹನವನ್ನು ಖದೀಮ ಕದ್ದು ಪರಾರಿಯಾಗಿದ್ದಾನೆ. ಬೆಳಿಗ್ಗೆ ವೇಳೆಯಲ್ಲೇ ಸಾರ್ವಜನಿಕರ ಸಂಚಾರ ನಡುವೆ ಆರೋಪಿ ಯಾವುದೇ ಆತಂಕವಿಲ್ಲದೆ ಬೈಕ್ ಎಗರಿಸಿರುವುದು ದೃಶ್ಯಾವಳಿಗಳಲ್ಲಿ ಕಂಡು ಬಂದಿದೆ.

ಕಳ್ಳತನದ ಬಳಿಕ ಬೈಕ್ ಅನ್ನು ಕೊಪ್ಪಳ ಮಾರ್ಗವಾಗಿ ಕೊಂಡೊಯ್ಯಲಾಗಿದೆ ಎಂಬ ಅನುಮಾನ ವ್ಯಕ್ತವಾಗಿದ್ದು, ಪೊಲೀಸರು ವಿವಿಧ ಚೆಕ್‌ಪೋಸ್ಟ್‌ಗಳಿಗೆ ವಾಹನದ ಮಾಹಿತಿ ರವಾನಿಸಿದ್ದಾರೆ. ಸಿಸಿ ಟಿವಿ ದೃಶ್ಯಗಳ ಆಧಾರದಲ್ಲಿ ಆರೋಪಿಯ ಪತ್ತೆಗೆ ಬೆಟಗೇರಿ ಬಡಾವಣೆ ಪೊಲೀಸ್ ಠಾಣೆ ಪೊಲೀಸರು ಬಲೆ ಬೀಸಿದ್ದಾರೆ. ಅವಳಿ ನಗರದಲ್ಲಿ ಇತ್ತೀಚೆಗೆ ಹೆಚ್ಚುತ್ತಿರುವ ವಾಹನ ಕಳ್ಳತನ ಪ್ರಕರಣಗಳು ಸಾರ್ವಜನಿಕರಲ್ಲಿ ಭಯದ ವಾತಾವರಣ ಸೃಷ್ಟಿಸಿದ್ದು, ಪೊಲೀಸರು ರಾತ್ರಿ ಹಾಗೂ ಬೆಳಗಿನ ಜಾವ ಗಸ್ತು ಹೆಚ್ಚಿಸುವಂತೆ ನಾಗರಿಕರು ಆಗ್ರಹಿಸಿದ್ದಾರೆ.

### ಹೊಲಗದ್ದೆಗಳಲ್ಲಿ ಮತ್ತೆ ಮೊಳಗಿದ ಎತ್ತುಗಳ ಗಂಟೆ ಸದ್ದು

# ಬಿತ್ತನೆ ಕಾರ್ಯದಲ್ಲಿ ಬ್ಯುಸಿ ಆದ ಅನ್ನದಾತರು!

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ವಿಜಯನಗರ ಜಿಲ್ಲೆಯ ಹಗರಿಬೊಮ್ಮನಹಳ್ಳಿ ತಾಲೂಕಿನಾದ್ಯಂತ ಮುಂಗಾರು ಮಳೆ ನಿರೀಕ್ಷೆಯ ನಡುವೆ ಗ್ರಾಮೀಣ ಪ್ರದೇಶಗಳಲ್ಲಿ ಕೃಷಿ ಚಟುವಟಿಕೆಗಳು ಚುರುಕುಗೊಂಡಿದ್ದು, ಹೊಲಗದ್ದೆಗಳಲ್ಲಿ ಮತ್ತೆ ರೈತರ ಸಂಭ್ರಮ ಮನೆಮಾಡಿದೆ.

ಬೆಳಗಿನ ಜಾವದಿಂದಲೇ ರೈತರು ಎತ್ತುಗಳ ಜೋಡಿ ಹಾಗೂ ಟ್ರ್ಯಾಕ್ಟರ್ ಸೇರಿದಂತೆ ವಿವಿಧ ಕೃಷಿ ಪರಿಕರಗಳೊಂದಿಗೆ ಹೊಲಗಳಿಗೆ ಇಳಿದು ಉಳಿಮೆ ಮತ್ತು ಬಿತ್ತನೆ ಕಾರ್ಯದಲ್ಲಿ ತೊಡಗಿರುವ ದೃಶ್ಯಗಳು ಗ್ರಾಮೀಣ ಬದುಕಿನ ಸೊಬಗನ್ನು ಮತ್ತಷ್ಟು ಹೆಚ್ಚಿಸಿವೆ.

ಮಳೆಯೇ ರೈತರ ಬದುಕಿನ ಜೀವನಾಡಿಯಾಗಿದ್ದು, ಉತ್ತಮ ಬೆಳೆ ನಿರೀಕ್ಷೆಯೊಂದಿಗೆ ರೈತರು ಭೂಮಿ ಸಿದ್ಧಪಡಿಸುವ ಕಾರ್ಯದಲ್ಲಿ ನಿರಂತರವಾಗಿ ತೊಡಗಿದ್ದಾರೆ. ಕೆಂಪು ಮಣ್ಣಿನ ಹೊಲಗಳಲ್ಲಿ ಎತ್ತುಗಳ ಮೂಲಕ ಉಳಿಮೆ ನಡೆಸುತ್ತಿರುವ ರೈತರ ಶ್ರಮ ಗ್ರಾಮೀಣ ಕೃಷಿ ಸಂಸ್ಕೃತಿಯ ಜೀವಂತ ಚಿತ್ರಣವಾಗಿ ಕಂಡುಬರುತ್ತಿದೆ.



> "ಮಳೆ ನಮ್ಮ ಬದುಕಿನ ಆಶಾಕಿರಣ. ಉತ್ತಮ ಮಳೆಯಾದರೆ ಉತ್ತಮ ಬೆಳೆ ಬರುತ್ತದೆ ಎಂಬ ನಂಬಿಕೆಯಲ್ಲಿ ಬಿತ್ತನೆ ಕಾರ್ಯ ಆರಂಭಿಸಿದ್ದೇವೆ. ಸರ್ಕಾರವೂ ರೈತರ ನೆರವಿಗೆ ನಿಲ್ಲಬೇಕು."
> **– ಬಾರಿಕರ ಪರಶುರಾಮ ಬ್ಯಾಲಾಳು, ರೈತ**

ಆಧುನಿಕ ಕೃಷಿ ಯಂತ್ರೋಪಕರಣಗಳ ಬಳಕೆ ಹೆಚ್ಚಾದರೂ, ಹಲವೆಡೆ ರೈತರು ಇಂದಿಗೂ ಎತ್ತುಗಳ ಮೂಲಕ ಉಳಿಮೆ ನಡೆಸುತ್ತಿರುವುದು ವಿಶೇಷವಾಗಿದೆ. ರೈತ ಕುಟುಂಬದ ಮಹಿಳೆಯರೂ ಹೊಲಗದ್ದೆಗಳಲ್ಲಿ ಪಾಲ್ಗೊಂಡು ಬಿತ್ತನೆ ಸಿದ್ಧತೆಯಲ್ಲಿ ಕೈಜೋಡಿಸುತ್ತಿದ್ದು, ಗ್ರಾಮೀಣ ಬದುಕಿನ ಒಗ್ಗಟ್ಟು ಮತ್ತೊಮ್ಮೆ ಅನಾವರಣಗೊಂಡಿದೆ.

ಈ ಬಾರಿ ಸಮಯಕ್ಕೆ ಸರಿಯಾಗಿ ಉತ್ತಮ ಮಳೆಯಾದರೆ ಉತ್ತಮ ಬೆಳೆ ದೊರೆಯುವ ನಿರೀಕ್ಷೆಯಲ್ಲಿ ರೈತರು ಬೀಜ, ರಸಗೊಬ್ಬರ ಹಾಗೂ ಕೃಷಿ ಸಾಮಗ್ರಿಗಳನ್ನು ಸಿದ್ಧಪಡಿಸಿಕೊಂಡಿದ್ದಾರೆ. "ಒಳ್ಳೆಯ ಮಳೆಯಾದರೆ ರೈತನ ಬದುಕು ಹಸನಾಗುತ್ತದೆ" ಎಂಬ ಆಶಾಭಾವನೆ ಗ್ರಾಮೀಣ ಭಾಗಗಳಲ್ಲಿ ವ್ಯಕ್ತವಾಗುತ್ತಿದೆ.

ಹೊಲಗದ್ದೆಗಳಲ್ಲಿ ಮತ್ತೆ ಕೇಳಿಬರುತ್ತಿರುವ ಎತ್ತುಗಳ ಗಂಟೆಗಳ ಶಬ್ದ, ಮಣ್ಣಿನ ಪರಿಮಳ ಹಾಗೂ ರೈತರ ಶ್ರಮ ಗ್ರಾಮೀಣ ಕೃಷಿ ಬದುಕಿಗೆ ಹೊಸ ಚೈತನ್ಯ ತುಂಬಿದೆ.

# ಜಲಾಶಂಕರದಲ್ಲಿ ವಿಶೇಷ ಅಭಿಷೇಕ

■ವಿಜಯಸಾಕ್ಷಿ ಸುದ್ದಿ, ಗದಗ

ಸಮೀಪದ ದಕ್ಷಿಣ ಕಾಶಿ ಖ್ಯಾತಿಯ ಶ್ರೀಕ್ಷೇತ್ರ ಜಲಾಶಂಕರದಲ್ಲಿ ಪ್ರತಿಷ್ಠಾಪನೆಗೊಂಡಿರುವ ಪಾಂಡುರಂಗ, ರುಕ್ಮಿಣಿ, ಜ್ಞಾನದೇವ ಹಾಗೂ ತುಕರಾಮರ ಮೂರ್ತಿಗಳಿಗೆ ಅಧಿಕ ಮಾಸದ ನಿಮಿತ್ತ ಗುರುವಾರ ವಿಶೇಷ ಪೂಜೆ ಹಾಗೂ ಅಭಿಷೇಕ ಕಾರ್ಯಕ್ರಮ ಭಕ್ತಿಪೂರ್ವಕವಾಗಿ ನೆರವೇರಿತು. ಪ್ರತಿವರ್ಷದ ಪದ್ಧತಿಯಂತೆ ಬೆಳಿಗ್ಗೆ 6 ಗಂಟೆಗೆ ಎಳನೀರು ಅಭಿಷೇಕ, ಪಂಚಾಮೃತ ಅಭಿಷೇಕ, ಗಂಧದ ಅಭಿಷೇಕ, ಅರಿಶಿಣ-ಕುಂಕುಮ ಅಭಿಷೇಕ ಹಾಗೂ ಕಾಕಡಾರತಿ ಅದ್ದೂರಿಯಾಗಿ ನಡೆಯಿತು.



ಅಭಿಷೇಕದ ಭಕ್ತಿಸೇವೆಯನ್ನು ಕಳಸಾಪೂರದ ಕಟ್ಟಿಮನಿ ಕುಟುಂಬದವರು ನೆರವೇರಿಸಿದರು.

ಪೂಜಾ ವಿಧಿ-ವಿಧಾನಗಳನ್ನು ಜಲಾಶಂಕರ ಕ್ಷೇತ್ರದ ಅರ್ಚಕರಾದ ಮಲ್ಲಯ್ಯಸ್ವಾಮಿ ಅಂಗಡಿ (ಹಿರೇಮಠ) ನೆರವೇರಿಸಿದರು ಎಂದು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


# ಪ್ರಾಂಶುಪಾಲ ಗುಳೇದಗುಡ್ಡರಿಗೆ ಬೀಳ್ಕೊಡುಗೆ ಇಂದು

■ವಿಜಯಸಾಕ್ಷಿ ಸುದ್ದಿ, ನರೇಗಲ್

ಪಟ್ಟಣದ ಮರಿಯಪ್ಪ ಬಾಳಪ್ಪ ಕಳಕೊಣ್ಣವರ ಸರ್ಕಾರಿ ಪ್ರಥಮ ದರ್ಜೆ ಮಹಾವಿದ್ಯಾಲಯದ ಪ್ರಾಂಶುಪಾಲ ಪ್ರೊ. ಎಸ್.ಎಲ್. ಗುಳೇದಗುಡ್ಡ ಅವರ ಸೇವಾ ನಿವೃತ್ತಿ ಹಿನ್ನೆಲೆಯಲ್ಲಿ ಬೀಳ್ಕೊಡುಗೆ ಸಮಾರಂಭವನ್ನು ಮೇ 30ರಂದು ಬೆಳಿಗ್ಗೆ 11 ಗಂಟೆಗೆ ಕಾಲೇಜಿನ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಇದೇ ಸಂದರ್ಭದಲ್ಲಿ ನೂತನ ಪ್ರಾಂಶುಪಾಲರಾಗಿ ಹಿರಿಯ ಪ್ರಾಧ್ಯಾಪಕಿ ಜಯಶ್ರೀ ಮುತಗಾರ ಅಧಿಕಾರ ಸ್ವೀಕರಿಸಲಿದ್ದಾರೆ.

ಕಾಲೇಜಿನ ವಿವಿಧ ವಿಭಾಗಗಳ ಮುಖ್ಯಸ್ಥರು, ಸಹೋದ್ಯೋಗಿಗಳು ಹಾಗೂ ಸಿಬ್ಬಂದಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.



# ಕ್ರೀಡಾ ವಸತಿ ಶಾಲೆಗಳ ಪ್ರವೇಶಕ್ಕೆ ವಿಶೇಷ ಆಯ್ಕೆ ಶಿಬಿರ

■ವಿಜಯಸಾಕ್ಷಿ ಸುದ್ದಿ, ಗದಗ

ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ 2026–27ನೇ ಸಾಲಿನ ಕ್ರೀಡಾ ವಸತಿ ಶಾಲೆ ಹಾಗೂ ನಿಲಯಗಳಿಗೆ 8ನೇ ತರಗತಿ ಮತ್ತು ಪ್ರಥಮ ಪಿಯುಸಿ ಮಟ್ಟದ ಅರ್ಹ ಕ್ರೀಡಾಪಟುಗಳ ಆಯ್ಕೆಗಾಗಿ ವಿಶೇಷ ಆಯ್ಕೆ ಶಿಬಿರಗಳನ್ನು ಆಯೋಜಿಸಲಾಗಿದೆ.

ಜಿಲ್ಲಾ ಹಾಗೂ ವಿಭಾಗ ಮಟ್ಟದ ಆಯ್ಕೆ ಪ್ರಕ್ರಿಯೆಯಲ್ಲಿ ವಿವಿಧ ಕಾರಣಗಳಿಂದ ಭಾಗವಹಿಸಲು ಸಾಧ್ಯವಾಗದ ಅಭ್ಯರ್ಥಿಗಳಿಗೆ ಮತ್ತೊಂದು ಅವಕಾಶ ಕಲ್ಪಿಸುವ ಉದ್ದೇಶದಿಂದ ರಾಜ್ಯದ ವಿವಿಧ ಕೇಂದ್ರಗಳಲ್ಲಿ ಈ ವಿಶೇಷ ಶಿಬಿರಗಳನ್ನು ಹಮ್ಮಿಕೊಳ್ಳಲಾಗಿದೆ.

ರಾಜ್ಯದ ಯಾವುದೇ ಭಾಗದ ಕ್ರೀಡಾಪಟುಗಳು ಭಾಗವಹಿಸಲು ಅವಕಾಶವಿದ್ದು, ಈಗಾಗಲೇ ಆಯ್ಕೆ ಶಿಬಿರಗಳಲ್ಲಿ ಭಾಗವಹಿಸದ ಅಭ್ಯರ್ಥಿಗಳು ಈ ಶಿಬಿರದಲ್ಲಿ ಪಾಲ್ಗೊಳ್ಳಬಹುದು. ಈಗಾಗಲೇ ರಾಜ್ಯ ಮಟ್ಟದ ಆಯ್ಕೆ ಶಿಬಿರಕ್ಕೆ ಆಯ್ಕೆಯಾಗಿರುವ ಅಭ್ಯರ್ಥಿಗಳು ತಮ್ಮ ಪ್ರದರ್ಶನವನ್ನು ಉತ್ತಮಪಡಿಸಿಕೊಳ್ಳುವ ಉದ್ದೇಶದಿಂದಲೂ ಭಾಗವಹಿಸಲು ಅವಕಾಶ ನೀಡಲಾಗಿದೆ.

8ನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಗಳು ಪ್ರಸ್ತುತ 7ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿದ್ದು, ಜೂನ್ 2026ಕ್ಕೆ ಅನ್ವಯವಾಗುವಂತೆ 14 ವರ್ಷದೊಳಗಿರಬೇಕು. ಪ್ರಥಮ ಪಿಯುಸಿ ಪ್ರವೇಶ ಬಯಸುವ ಅಭ್ಯರ್ಥಿಗಳ ವಯಸ್ಸು ಜೂನ್ 2026ಕ್ಕೆ ಅನ್ವಯವಾಗುವಂತೆ 18 ವರ್ಷದೊಳಗಿರಬೇಕು.

ಜೂನ್ 1ರಂದು ಬೆಳಗಾವಿ ಜಿಲ್ಲಾ ಕ್ರೀಡಾಂಗಣದಲ್ಲಿ ವಾಲಿಬಾಲ್, ಸೈಕ್ಲಿಂಗ್, ಕುಸ್ತಿ ಹಾಗೂ ಜುಡೋ; ತುಮಕೂರಿನ ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದಲ್ಲಿ ಅಥ್ಲೆಟಿಕ್ಸ್, ಕಬಡ್ಡಿ, ಜಿಮ್ನಾಸ್ಟಿಕ್ಸ್ ಹಾಗೂ ಫುಟ್‌ಬಾಲ್; ಬೆಂಗಳೂರಿನ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಬಾಸ್ಕೆಟ್‌ಬಾಲ್, ಬಾಕ್ಸಿಂಗ್, ಅರ್ಚರಿ ಹಾಗೂ ಫೆನ್ಸಿಂಗ್; ಬೆಂಗಳೂರಿನ ಅಕ್ಕಿತಿಮ್ಮನಹಳ್ಳಿ ಹಾಕಿ ಕ್ರೀಡಾಂಗಣದಲ್ಲಿ ಹಾಕಿ ವಿಭಾಗದ ಆಯ್ಕೆ ಪ್ರಕ್ರಿಯೆ ನಡೆಯಲಿದೆ.

ಶಿಬಿರದಲ್ಲಿ ಭಾಗವಹಿಸಲು ಬರುವ ಕ್ರೀಡಾಪಟುಗಳು ತಮ್ಮ ಪ್ರಯಾಣ ವೆಚ್ಚವನ್ನು ತಾವೇ ಭರಿಸಬೇಕಾಗಿದ್ದು, ಕ್ರೀಡಾಪಟುಗಳನ್ನು ಕರೆತರುವುದು ಹಾಗೂ ಹಿಂದಿರುಗಿಸುವ ಜವಾಬ್ದಾರಿ ಪೋಷಕರದ್ದಾಗಿರುತ್ತದೆ.

ಕ್ರೀಡಾ ವೈಜ್ಞಾನಿಕ ಪರೀಕ್ಷೆಯಲ್ಲಿ ಭಾಗವಹಿಸುವ ಅಭ್ಯರ್ಥಿಗಳು ಯಾವುದೇ ರೀತಿಯ ಚಿನ್ನಾಭರಣ ಧರಿಸಿಕೊಂಡು ಬರಬಾರದು ಎಂದು ಇಲಾಖೆ ಸೂಚಿಸಿದೆ. ಈ ಕುರಿತು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ಗದಗ ಸೇರಿ ಉತ್ತರ ಕರ್ನಾಟಕದ ನೀರಾವರಿ ಯೋಜನೆಗಳ ಕಾರ್ಯಕ್ಷಮತೆ ಕುರಿತು ಧಾರವಾಡದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ ಖಡಕ್ ಎಚ್ಚರಿಕೆ**

# ಕೆರೆ ತುಂಬದಿದ್ದರೆ ಅಧಿಕಾರಿಗಳೆ ಹೊಣೆ!

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಜಲಸಂಪನ್ಮೂಲ ಇಲಾಖೆ ಹಾಗೂ ಸಣ್ಣ ನೀರಾವರಿ ಇಲಾಖೆಯ ಅಡಿಯಲ್ಲಿನ ಏತ ನೀರಾವರಿ ಯೋಜನೆಗಳು, ಕೆರೆ ತುಂಬಿಸುವ ಯೋಜನೆಗಳು ಹಾಗೂ ಸೂಕ್ಷ್ಮ ನೀರಾವರಿ ಯೋಜನೆಗಳ ಕಾರ್ಯಕ್ಷಮತೆ ಅಧ್ಯಯನಕ್ಕಾಗಿ ಸರ್ಕಾರ ರಚಿಸಿರುವ ವಿಧಾನ ಪರಿಷತ್ ಸದಸ್ಯರ ಸಮಿತಿಯ 11ನೇ ಸಭೆ ಮೇ 27ರಂದು ಧಾರವಾಡದ ವಾಲ್ಮಿ ಸಂಸ್ಥೆಯ ಸಭಾಂಗಣದಲ್ಲಿ ನಡೆಯಿತು.

ಕರ್ನಾಟಕ ವಿಧಾನ ಪರಿಷತ್ ಸದಸ್ಯ ಎಸ್. ರವಿ ಅವರ ಅಧ್ಯಕ್ಷತೆಯಲ್ಲಿ 18 ಸದಸ್ಯರನ್ನೊಳಗೊಂಡ ಸಮಿತಿಯನ್ನು ಸರ್ಕಾರ ರಚಿಸಿದ್ದು, ಸಭೆಗೆ ಶಾಸಕ ಯು.ಬಿ. ಬಣಕಾರ್ ಅಧ್ಯಕ್ಷತೆ ವಹಿಸಿದ್ದರು. ಶಾಸಕರು ಹಾಗೂ ಸದಸ್ಯರಾದ ಸಿಮೆಂಟ್ ಮಂಜು, ಗಣೇಶ್ ಪ್ರಕಾಶ್ ಹುಕ್ಕೇರಿ ಹಾಗೂ ನಿರಾಣಿ ಹನುಮಂತ್ ರುದ್ರಪ್ಪ ಉಪಸ್ಥಿತರಿದ್ದರು.

ಸಭೆಯಲ್ಲಿ ಧಾರವಾಡ ವಲಯಕ್ಕೆ ಸಂಬಂಧಿಸಿದ ಬಾಗಲಕೋಟೆ, ಗದಗ, ಧಾರವಾಡ, ಬೆಳಗಾವಿ, ಹಾವೇರಿ ಜಿಲ್ಲೆಗಳು ಹಾಗೂ ಬೆಳಗಾವಿ ವಲಯಕ್ಕೆ ಸಂಬಂಧಿಸಿದ ವಿಜಯಪುರ ಮತ್ತು ಬಾಗಲಕೋಟೆ ಜಿಲ್ಲೆಯ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ, ಪ್ರಗತಿಯಲ್ಲಿರುವ ಹಾಗೂ ದುರಸ್ತಿಯಲ್ಲಿರುವ ಏತ ನೀರಾವರಿ ಮತ್ತು ಕೆರೆ ತುಂಬಿಸುವ ಯೋಜನೆಗಳ ಕಾರ್ಯಕ್ಷಮತೆ ಕುರಿತು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಸುದೀರ್ಘ ಚರ್ಚೆ ನಡೆಯಿತು.



ಏತ ನೀರಾವರಿ ಯೋಜನೆಗಳ ವಿನ್ಯಾಸಿತ ಅಚ್ಚುಕಟ್ಟು ಪ್ರದೇಶಗಳಿಗೆ ಸಮರ್ಪಕ ನೀರಾವರಿ ಸೌಲಭ್ಯ ಒದಗಿಸುವುದು ಹಾಗೂ ಎಲ್ಲ ಕೆರೆ ತುಂಬಿಸುವ ಯೋಜನೆಗಳಡಿ ನಿಗದಿತ ಅವಧಿಯಲ್ಲಿ ಕೆರೆಗಳನ್ನು ತುಂಬಿಸುವ ಕುರಿತು ಅಗತ್ಯ ಕ್ರಮ ಕೈಗೊಳ್ಳುವಂತೆ ಸಮಿತಿ ಸದಸ್ಯರು ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

ಯೋಜನೆಗಳ ವಾರ್ಷಿಕ ವಿದ್ಯುತ್ ಶುಲ್ಕ ಹಾಗೂ ನಿರ್ವಹಣಾ ವೆಚ್ಚದ ಕೊರತೆಯನ್ನು ಸರಿದೂಗಿಸಲು ಇಲಾಖೆ ಕೈಗೊಳ್ಳಬಹುದಾದ ಕ್ರಮಗಳು, ನೀರು ಬಳಕೆದಾರರ ಸಂಘಗಳ ರಚನೆ, ನೀರಾವರಿ ಕರ ವಸೂಲಾತಿ ಹಾಗೂ ಕೆರೆ ತುಂಬು ಯೋಜನೆಗಳಿಂದ ಮೀನುಗಾರಿಕೆ ಮೂಲಕ ಆದಾಯ ಕ್ರೋಢೀಕರಣ ಕುರಿತೂ ಸಭೆಯಲ್ಲಿ ಚರ್ಚಿಸಲಾಯಿತು.

ಅಧಿಕಾರಿಗಳ ಮನವಿಯಂತೆ, ಯೋಜನೆಗಳ ನಿರಂತರ ಕಾರ್ಯಕ್ಷಮತೆಗೆ ಅಗತ್ಯ ನಿರ್ವಹಣಾ ಅನುದಾನ ಹಾಗೂ ವಿದ್ಯುತ್ ಶುಲ್ಕವನ್ನು ನಿಗದಿತ ಅವಧಿಯಲ್ಲಿ ಪಾವತಿಸಲು ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸುವುದಾಗಿ ಸಭೆಯಲ್ಲಿ ತಿಳಿಸಲಾಯಿತು. ತಾತ್ಕಾಲಿಕವಾಗಿ ನಿಷ್ಕ್ರಿಯವಾಗಿರುವ ಯೋಜನೆಗಳಿಗೆ ಅನುದಾನ ಒದಗಿಸಲು ಸರ್ಕಾರಕ್ಕೆ ಶಿಫಾರಸ್ಸು ಮಾಡುವುದಾಗಿಯೂ ಸಭೆಯಲ್ಲಿ ಅಭಿಪ್ರಾಯ ವ್ಯಕ್ತವಾಯಿತು.

ಪ್ರಗತಿಯಲ್ಲಿರುವ ಎಲ್ಲ ಏತ ನೀರಾವರಿ ಯೋಜನೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಿ ವಿನ್ಯಾಸಿತ ಅಚ್ಚುಕಟ್ಟು ಪ್ರದೇಶಗಳಿಗೆ ನೀರಾವರಿ ಸೌಲಭ್ಯ ಒದಗಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಯಿತು.

ಮಲಪ್ರಭಾ, ಘಟಪ್ರಭಾ, ಭದ್ರಾ, ವಿಜಯನಗರ ಕಾಲುವೆ ಹಾಗೂ ಗೊಂದಿ ಯೋಜನೆಯ ನೀರು ಬಳಕೆದಾರರ ಸಹಕಾರಿ ಸಂಘಗಳ ಮಹಾಮಂಡಳಗಳ ಕಾರ್ಯವೈಖರಿ ಹಾಗೂ ನಿರ್ವಹಣೆ ಕುರಿತು ಮಹಾಮಂಡಳಗಳ ಅಧ್ಯಕ್ಷರು ಪ್ರಾತ್ಯಕ್ಷಿಕೆ ನೀಡಿದರು.

ಗೊಂದಿ ಯೋಜನೆಯ ನೀರು ಬಳಕೆದಾರರ ಸಹಕಾರಿ ಸಂಘದ ಮಹಾಮಂಡಳದ ಕಾರ್ಯವೈಖರಿಗೆ ಸಭೆಯಲ್ಲಿ ವಿಶೇಷ ಶ್ಲಾಘನೆ ವ್ಯಕ್ತವಾಗಿದ್ದು, ಇದೇ ಮಾದರಿಯಲ್ಲಿ ಕಾರ್ಯನಿರ್ವಹಿಸುವಂತೆ ಇತರ ಮಹಾಮಂಡಳಗಳ ಅಧ್ಯಕ್ಷರಿಗೆ ಸಮಿತಿ ಸೂಚಿಸಿತು.

> "ಅಚ್ಚುಕಟ್ಟು ಪ್ರದೇಶಗಳಿಗೆ ನೀರಾವರಿ ಸೌಲಭ್ಯ ತಲುಪಿಸಿ, ಎಲ್ಲ ಕೆರೆ ತುಂಬಿಸುವ ಯೋಜನೆಗಳನ್ನು ನಿಗದಿತ ಅವಧಿಯಲ್ಲಿ ಪೂರ್ಣಗೊಳಿಸಲು ಅಧಿಕಾರಿಗಳು ಕ್ರಮ ಕೈಗೊಳ್ಳಬೇಕು."
> **– ನೀರಾವರಿ ಯೋಜನೆಗಳ ಕಾರ್ಯಕ್ಷಮತೆ ಅಧ್ಯಯನ ಸಮಿತಿ ಸದಸ್ಯರು**


ನೆಲ ಮತ್ತು ಜಲ ನಿರ್ವಹಣೆ ಸಂಸ್ಥೆ ಹಾಗೂ ಅಚ್ಚುಕಟ್ಟು ನೀರಾವರಿ ಪ್ರಾಧಿಕಾರದ ಅಧಿಕಾರಿಗಳು ರೈತರು ನೀರನ್ನು ಮಿತವಾಗಿ ಬಳಸಿಕೊಂಡು ಬೆಳೆ ಇಳುವರಿ ಹೆಚ್ಚಿಸುವ ವಿಧಾನಗಳು, ಆಧುನಿಕ ಕೃಷಿ ಪದ್ಧತಿ, ನೀರು ಬಳಕೆದಾರರ ಸಹಕಾರ ಸಂಘಗಳ ರಚನೆ ಹಾಗೂ ಬಲವರ್ಧನೆ, ನೀರಿನ ಕರ ವಸೂಲಾತಿ ಮತ್ತು ರೈತರ ಸಹಭಾಗಿತ್ವದಲ್ಲಿ ನೀರು ನಿರ್ವಹಣೆ ಕುರಿತು ಸಭೆಯಲ್ಲಿ ಮಾಹಿತಿ ನೀಡಿದರು.

ಸಭೆಯಲ್ಲಿ ಸಮಿತಿಯ ತಾಂತ್ರಿಕ ಸಲಹೆಗಾರ ಹಾಗೂ ಕಾವೇರಿ ನೀರಾವರಿ ನಿಗಮದ ನಿವೃತ್ತ ವ್ಯವಸ್ಥಾಪಕ ನಿರ್ದೇಶಕ ಶಂಕರೇಗೌಡ, ನಿವೃತ್ತ ಮುಖ್ಯ ಇಂಜಿನಿಯರ್ ಚೆಲುವರಾಜ್, ನಿವೃತ್ತ ಅಧೀಕ್ಷಕ ಇಂಜಿನಿಯರ್ ರಾಜಶೇಖರ್, ಕರ್ನಾಟಕ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ರಾಜೇಶ್ ಅಮ್ಮಿನಭಾವಿ ಹಾಗೂ ಯೋಜನೆಗಳಿಗೆ ಸಂಬಂಧಿಸಿದ ಮುಖ್ಯ ಇಂಜಿನಿಯರ್‌ಗಳು ಮತ್ತು ತಾಂತ್ರಿಕ ಅಧಿಕಾರಿಗಳು ಭಾಗವಹಿಸಿದ್ದರು.

# ಯೂಟ್ಯೂಬ್‌ನಲ್ಲಿ 'ಕಾಲಘಟ್ಟ' ಸದ್ದು

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ದಿಕ್ಷಿತಾ ಎಂಟರ್‌ಪ್ರೈಸಸ್ ಬೆಂಗಳೂರು ನಿರ್ಮಾಣದ ಕನ್ನಡ ಚಲನಚಿತ್ರ ಕಾಲಘಟ್ಟ ಚಿತ್ರದ ಮೊದಲ ಲಿರಿಕಲ್ ಹಾಡು "ನೀನೇನೆ ನನ್ನ ದೇವತೆ" ಬಿಡುಗಡೆಯಾಗಿ ಸಿನಿಪ್ರೇಕ್ಷಕರು ಹಾಗೂ ಸಂಗೀತಪ್ರಿಯರ ಮನಗೆದ್ದಿದೆ. ಯೂಟ್ಯೂಬ್‌ನಲ್ಲಿ ಬಿಡುಗಡೆಯಾದ ಕೆಲವೇ ದಿನಗಳಲ್ಲಿ ಹಾಡು ಭರ್ಜರಿ ಸದ್ದು ಮಾಡುತ್ತಿದ್ದು, ಸಾಮಾಜಿಕ ಜಾಲತಾಣಗಳಲ್ಲಿಯೂ ಮೆಚ್ಚುಗೆ ಗಳಿಸುತ್ತಿದೆ.



ಈ ಹಾಡು ಕೇವಲ ಮೆಲೋಡಿ ಹಾಡಲ್ಲ, ನಮ್ಮ ಮಣ್ಣಿನ ಆತ್ಮ, ಸಂಸ್ಕೃತಿ ಮತ್ತು ಭಾವನೆಗಳನ್ನು ಹೊತ್ತ ಒಂದು ಸಂಗೀತ ಅನುಭವವಾಗಿದೆ ಎಂದು ಯುವ ನಿರ್ದೇಶಕ ಕೆ. ಪ್ರಕಾಶ್ ಅಂಬಳೆ ತಿಳಿಸಿದ್ದಾರೆ.

ಹಾಡಿನಲ್ಲಿ ಮೈಲಾರ, ಹರಕೆ, ಜಾಗಟೆ, ಕಾವೇರಿ ಮೊದಲಾದ ನಮ್ಮ ನಾಡಿನ ನಂಬಿಕೆ ಹಾಗೂ ಸಂಸ್ಕೃತಿಯನ್ನು ಪ್ರತಿಬಿಂಬಿಸುವ ಪದಗಳನ್ನು ಬಳಕೆ ಮಾಡಲಾಗಿದ್ದು, ಪ್ರೇಕ್ಷಕರಿಗೆ ತಮ್ಮ ಊರು, ಪ್ರೀತಿ ಹಾಗೂ ನೆನಪುಗಳನ್ನು ಮರುಕಳಿಸುವ ಪ್ರಯತ್ನ ಮಾಡಲಾಗಿದೆ ಎಂದು ಅವರು ಹೇಳಿದ್ದಾರೆ.

> "'ನೀನೇನೆ ನನ್ನ ದೇವತೆ' ಹಾಡು ಕೇವಲ ಮೆಲೋಡಿ ಅಲ್ಲ; ಅದು ನಮ್ಮ ಮಣ್ಣಿನ ಸಂಸ್ಕೃತಿ, ನಂಬಿಕೆ ಮತ್ತು ಭಾವನೆಗಳನ್ನು ಹೊತ್ತ ಆತ್ಮೀಯ ಪ್ರಯತ್ನ."
> **– ಕೆ. ಪ್ರಕಾಶ್ ಅಂಬಳೆ, ನಿರ್ದೇಶಕ**

ಚಿತ್ರದಲ್ಲಿ ಅಭಿದಾಸ್ ಹಾಗೂ ನಿತಿಲ್ ನಾಯಕ ಪಾತ್ರಗಳಲ್ಲಿ ಅಭಿನಯಿಸಿದ್ದು, ಖುಷಿ ಮತ್ತು ಮೇಘ ನಾಯಕಿಯರಾಗಿ ಕಾಣಿಸಿಕೊಂಡಿದ್ದಾರೆ. ಹಿರಿಯ ಕಲಾವಿದರಾದ ಶೋಭರಾಜ್, ಭವ್ಯ, ರಮೇಶ್ ಭಟ್, ಪ್ರಶಾಂತ್ ರವಿ ಹಾಗೂ ಮಂಡ್ಯ ಸೀತಾರಾಮ್ ಪ್ರಮುಖ ಪಾತ್ರಗಳಲ್ಲಿ ಅಭಿನಯಿಸಿದ್ದಾರೆ.

ಚಿತ್ರಕ್ಕೆ ಸದಾಶಿವ ಹಿರೇಮಠ ಹಾಗೂ ರಾಜ್ ಕಡೂರ್ ಛಾಯಾಗ್ರಹಣ, ಎ.ಎಂ. ನೀಲ್ ಸಂಗೀತ, ವೆಂಕಿ ಯುಡಿವಿ ಸಂಕಲನ, ಮಾಸ್ ಮಾದ ಸಾಹಸ ನಿರ್ದೇಶನವಿದ್ದು, ನಮ್ ಋಷಿ, ಸ್ಯಾಂಕಿ ಹಾಗೂ ಸಿದ್ದು ಶಿವರಾಮ್ ಸಾಹಿತ್ಯ ರಚಿಸಿದ್ದಾರೆ.

ಕಥೆ, ಚಿತ್ರಕಥೆ, ಸಂಭಾಷಣೆ ಜೊತೆಗೆ ನಿರ್ದೇಶನವನ್ನು ಕೆ. ಪ್ರಕಾಶ್ ಅಂಬಳೆ ವಹಿಸಿಕೊಂಡಿದ್ದು, ಲಯನ್ ಚಿಕ್ಕೇಗೌಡ ಹಾಗೂ ಟಿ.ಸಿ. ತಳಗವಾಡಿ ಚಿತ್ರಕ್ಕೆ ನಿರ್ಮಾಪಕರಾಗಿದ್ದಾರೆ.

ಮುಂದಿನ ತಿಂಗಳು ರಾಜ್ಯಾದ್ಯಂತ ತೆರೆಗೆ ಬರಲಿರುವ ಕಾಲಘಟ್ಟ ಚಿತ್ರ–ಕ್ಕೆ ಸಿನಿಪ್ರೇಕ್ಷಕರ ಪ್ರೀತಿ ಹಾಗೂ ಆಶೀರ್ವಾದ ದೊರೆಯಲಿ ಎಂಬ ಆಶಯವನ್ನು ಚಿತ್ರತಂಡ ವ್ಯಕ್ತಪಡಿಸಿದೆ.

# ಮಳೆಯ ಅಬ್ಬರಕ್ಕೆ ಕೊಚ್ಚಿ ಹೋದ ಹೊಲದ ಒಡ್ಡುಗಳು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಕಳೆದ ರವಿವಾರ ಸುರಿದ ಭಾರೀ ಮಳೆಗೆ ಸಮೀಪದ ಜಕ್ಕಲಿ ಗ್ರಾಮದಲ್ಲಿ ರೈತರ ಹೊಲಗಳ ಒಡ್ಡುಗಳು ಕೊಚ್ಚಿ ಹೋಗಿ ಅಪಾರ ಹಾನಿ ಸಂಭವಿಸಿದ್ದು, ಮುಂಗಾರು ಬಿತ್ತನೆ ಆರಂಭದ ಹೊತ್ತಲ್ಲೇ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ.

ಮಳೆಯ ರಭಸಕ್ಕೆ ಹಲವೆಡೆ ಹೊಲಗಳ ಮಣ್ಣು ಹರಿದು ಹೋಗಿದ್ದು, ಬಿತ್ತನೆಗೆ ಸಿದ್ಧಪಡಿಸಿದ್ದ ಜಮೀನು ಹಾನಿಗೊಳಗಾಗಿದೆ. ಒಂದೆಡೆ ಮಳೆಯ ಸದುಪಯೋಗ ಪಡೆದು ಬಿತ್ತನೆ ಕಾರ್ಯ ಕೈಗೊಳ್ಳಬೇಕಾದ ಅನಿವಾರ್ಯತೆ ಇದ್ದರೆ, ಮತ್ತೊಂದೆಡೆ ಹೊಲದ ನೀರು ನಿಯಂತ್ರಣಕ್ಕಾಗಿ ಒಡ್ಡುಗಳನ್ನು ಮರುನಿರ್ಮಾಣ ಮಾಡಬೇಕಾದ ಪರಿಸ್ಥಿತಿ ರೈತರನ್ನು ಸಂಕಷ್ಟಕ್ಕೆ ದೂಡಿದೆ.



ಟ್ರ್ಯಾಕ್ಟರ್ ಹಾಗೂ ಜೆಸಿಬಿ ಯಂತ್ರಗಳ ಮೂಲಕ ಒಡ್ಡು ನಿರ್ಮಾಣಕ್ಕೆ ಹೆಚ್ಚುವರಿ ವೆಚ್ಚವಾಗುತ್ತಿದ್ದು, ಈಗಾಗಲೇ ಬೀಜ ಮತ್ತು ರಸಗೊಬ್ಬರ ಖರೀದಿಯಿಂದ ಆರ್ಥಿಕ ಒತ್ತಡದಲ್ಲಿರುವ ರೈತರಿಗೆ ಇದು ಮತ್ತೊಂದು ಹೊರೆ ಆಗಿದೆ. ಕೆಲವು ರೈತರು ಕುಟುಂಬ ಸದಸ್ಯರೊಂದಿಗೆ ಕೈಯಾರೆ ಒಡ್ಡು ನಿರ್ಮಾಣ ಕಾರ್ಯದಲ್ಲಿ ತೊಡಗಿಸಿಕೊಂಡಿರುವ ದೃಶ್ಯಗಳು ಗ್ರಾಮದಲ್ಲಿ ಕಂಡುಬಂದವು.

ಮಳೆ ಬಂದರೆ ಬೆಳೆಗೆ ಅನುಕೂಲವಾಗುತ್ತದೆ ಎಂದು ನಿರೀಕ್ಷಿಸಿದ್ದೆವು. ಆದರೆ ಒಂದೇ ಮಳೆಗೆ ಹೊಲದ ಒಡ್ಡುಗಳು ಹರಿದು ಹೋಗಿವೆ. ಈಗ ಮೊದಲು ಬಿತ್ತನೆ ಮಾಡಬೇಕೋ ಅಥವಾ ಒಡ್ಡು ನಿರ್ಮಾಣ ಮಾಡಬೇಕೋ ಎಂಬ ಗೊಂದಲದಲ್ಲಿದ್ದೇವೆ ಎಂದು ರೈತರು ಅಳಲು ತೋಡಿಕೊಂಡಿದ್ದಾರೆ.

ಗ್ರಾಮಕ್ಕೆ ಸಂಬಂಧಿಸಿದ ಅಧಿಕಾರಿಗಳು ಭೇಟಿ ನೀಡಿ ಹಾನಿ ಪರಿಶೀಲನೆ ನಡೆಸಿ ರೈತರಿಗೆ ತುರ್ತು ನೆರವು ಹಾಗೂ ಸೂಕ್ತ ಪರಿಹಾರ ಒದಗಿಸಬೇಕು ಎಂದು ಗ್ರಾಮಸ್ಥರು ಆಗ್ರಹಿಸಿದ್ದಾರೆ.

**458 ಕೋರ್ಸ್ ರದ್ದತಿ ಆದೇಶಕ್ಕೆ ಎಐಡಿಎಸ್‌ಓ ತೀವ್ರ ವಿರೋಧ**

# ಮೂಲ ವಿಷಯಗಳಿಗೆ ಸರ್ಕಾರ ಕತ್ತರಿ?

■ವಿಜಯಸಾಕ್ಷಿ ಸುದ್ದಿ, ಗದಗ

ರಾಜಕೀಯ ವಿಜ್ಞಾನ, ಸಮಾಜಶಾಸ್ತ್ರ, ಐಚ್ಛಿಕ ಕನ್ನಡ, ಅರ್ಥಶಾಸ್ತ್ರ, ಗಣಿತ, ಭೌತಶಾಸ್ತ್ರ, ರಸಾಯನಶಾಸ್ತ್ರ ಹಾಗೂ ಕಂಪ್ಯೂಟರ್ ಸೈನ್ಸ್ ಸೇರಿದಂತೆ ಮೂಲಭೂತ ವಿಷಯಗಳ ಕೋರ್ಸ್‌ಗಳನ್ನು ಬೇಡಿಕೆಯಿಲ್ಲ ಎಂಬ ನೆಪವೊಡ್ಡಿ ರದ್ದುಪಡಿಸಲು ರಾಜ್ಯ ಸರ್ಕಾರ ಮುಂದಾಗಿರುವ ಕ್ರಮವನ್ನು ಎಐಡಿಎಸ್‌ಓ ತೀವ್ರವಾಗಿ ಖಂಡಿಸಿದೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಎಐಡಿಎಸ್‌ಓ ಜಿಲ್ಲಾ ಸಂಚಾಲಕಿ ಎಂ. ಶಾಂತಿ, ಕಾಲೇಜು ಶಿಕ್ಷಣ ಇಲಾಖೆ 2026ರ ಮೇ 21ರಂದು ಒಟ್ಟು 458 ಕೋರ್ಸ್‌ಗಳನ್ನು ರದ್ದುಪಡಿಸುವ ಆದೇಶ ಹೊರಡಿಸಿರುವುದು ಶಿಕ್ಷಣ ಕ್ಷೇತ್ರಕ್ಕೆ ಆತಂಕಕಾರಿ ಬೆಳವಣಿಗೆಯಾಗಿದೆ ಎಂದು ಆರೋಪಿಸಿದ್ದಾರೆ.

ವಿವಿಧ ಕೋರ್ಸ್‌ಗಳಿಗೆ ವಿದ್ಯಾರ್ಥಿಗಳ ದಾಖಲಾತಿ ಕುಸಿಯಲು ಉದ್ಯೋಗಾವಕಾಶಗಳ ಕೊರತೆಯೇ ಪ್ರಮುಖ ಕಾರಣವಾಗಿದೆ. ಶಿಕ್ಷಣ ಇಲಾಖೆ ಸೇರಿದಂತೆ ವಿವಿಧ ಸರ್ಕಾರಿ ಇಲಾಖೆಗಳಲ್ಲಿನ ಸಾವಿರಾರು ಹುದ್ದೆಗಳು ವರ್ಷಗಳಿಂದ ಖಾಲಿ ಉಳಿದಿವೆ. ಶಿಕ್ಷಣ ಇಲಾಖೆಯಲ್ಲೇ ಒಂದು ಲಕ್ಷಕ್ಕೂ ಅಧಿಕ ಹುದ್ದೆಗಳು ಖಾಲಿ ಇದ್ದು, ಸರ್ಕಾರ ಮೊದಲು ಅವುಗಳನ್ನು ಭರ್ತಿ ಮಾಡುವ ಕೆಲಸ ಮಾಡಬೇಕು ಎಂದು ಒತ್ತಾಯಿಸಿದ್ದಾರೆ.



> "ಮೂಲ ವಿಷಯಗಳ ಕೋರ್ಸ್‌ಗಳನ್ನು ರದ್ದುಪಡಿಸುವುದು ಶಿಕ್ಷಣದ ಅಡಿಪಾಯಕ್ಕೆ ಕೊಡಲಿ ಪೆಟ್ಟು ಹಾಕಿದಂತಾಗಿದೆ."
> **– ಎಂ. ಶಾಂತಿ, ಜಿಲ್ಲಾ ಸಂಚಾಲಕಿ, ಎಐಡಿಎಸ್‌ಓ ಗದಗ**

ದಾಖಲಾತಿ ಕಡಿಮೆಯಾಗಿದೆ ಎಂಬ ಕಾರಣ ನೀಡಿ ಕೋರ್ಸ್‌ಗಳನ್ನೇ ರದ್ದುಪಡಿಸುವ ಮೂಲಕ ಸರ್ಕಾರ ತನ್ನ ಜವಾಬ್ದಾರಿಯಿಂದ ನುಣುಚಿಕೊಳ್ಳುತ್ತಿದೆ. ಮೂಲ ವಿಷಯಗಳ ಕಲಿಕೆಗೆ ಕತ್ತರಿ ಹಾಕುವ ಮೂಲಕ ಶಿಕ್ಷಣದ ಅಡಿಪಾಯವನ್ನೇ ದುರ್ಬಲಗೊಳಿಸಲಾಗುತ್ತಿದೆ ಎಂದು ಪ್ರಕಟಣೆಯಲ್ಲಿ ಆಕ್ರೋಶ ವ್ಯಕ್ತಪಡಿಸಲಾಗಿದೆ.


ಈ ಕುರಿತು ಶಿಕ್ಷಣ ತಜ್ಞರು, ವಿದ್ಯಾರ್ಥಿಗಳು ಹಾಗೂ ಪೋಷಕರೊಂದಿಗೆ ಯಾವುದೇ ಸಮಾಲೋಚನೆ ನಡೆಸದೇ ಏಕಪಕ್ಷೀಯ ನಿರ್ಧಾರ ಕೈಗೊಂಡಿರುವುದು ಅಪ್ರಜಾತಾಂತ್ರಿಕ ನಡೆ ಎಂದು ಟೀಕಿಸಲಾಗಿದೆ.

ಮಾರುಕಟ್ಟೆ ಬೇಡಿಕೆಯ ಹೆಸರಿನಲ್ಲಿ ಅನುದಾನರಹಿತ ಕೋರ್ಸ್‌ಗಳನ್ನು ಆರಂಭಿಸುವ ಮೂಲಕ ಸಾರ್ವಜನಿಕ ಶಿಕ್ಷಣ ವ್ಯವಸ್ಥೆಯನ್ನು ಖಾಸಗೀಕರಣಗೊಳಿಸುವ ಸಂಚು ನಡೆಯುತ್ತಿದೆ ಎಂದು ಆರೋಪಿಸಿರುವ ಎಐಡಿಎಸ್‌ಓ, ಸರ್ಕಾರ ಕೂಡಲೇ ತನ್ನ ಆದೇಶವನ್ನು ಹಿಂಪಡೆದು ಮೂಲ ವಿಷಯಗಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಆಗ್ರಹಿಸಿದೆ.

# ಶಾಲಾ ಸ್ವಚ್ಛತೆಗೆ ಕೈಜೋಡಿಸಿದ ಅವ್ವಾ ಸೇವಾ ಪ್ರತಿಷ್ಠಾನ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಅವ್ವಾ ಸೇವಾ ಪ್ರತಿಷ್ಠಾನದ ಸಾಮಾಜಿಕ ಹಾಗೂ ಶೈಕ್ಷಣಿಕ ಕಾರ್ಯಗಳು ಶ್ಲಾಘನೀಯವಾಗಿವೆ ಎಂದು ಶಿಕ್ಷಕ ಕೆ.ಎಂ. ಹೇರಕಲ್ಲ ಹೇಳಿದರು. ಪಟ್ಟಣದ ಸರ್ಕಾರಿ ಮಾದರಿ ಕನ್ನಡ ಗಂಡು ಮಕ್ಕಳ ಶಾಲೆ ನಂ.1ರಲ್ಲಿ 2026–27ನೇ ಸಾಲಿನ ಶಾಲಾ ಪ್ರಾರಂಭೋತ್ಸವದ ನಿಮಿತ್ತ ಅವ್ವಾ ಸೇವಾ ಪ್ರತಿಷ್ಠಾನದ ವತಿಯಿಂದ ಹಮ್ಮಿಕೊಂಡಿದ್ದ ಶಾಲಾ ಆವರಣ ಸ್ವಚ್ಛತಾ ಕಾರ್ಯದಲ್ಲಿ ಭಾಗವಹಿಸಿ ಅವರು ಮಾತನಾಡಿದರು. ಪಟ್ಟಣದ ಶಿಕ್ಷಕ ಮಂಜುನಾಥ ಮಟ್ಟಿ ಅವರ ತಾಯಿ ದಿ. ಸಾವತ್ರವ್ವ ಮಟ್ಟಿ ಅವರ ಹೆಸರಿನಲ್ಲಿ ಸ್ಥಾಪಿತವಾದ "ಅವ್ವಾ ಸೇವಾ ಪ್ರತಿಷ್ಠಾನ" ಪ್ರತಿವರ್ಷ ಶಾಲಾ ಆವರಣ ಸ್ವಚ್ಛಗೊಳಿಸುವುದು, ಸಾಮಾಜಿಕ, ಶೈಕ್ಷಣಿಕ ಹಾಗೂ ಧಾರ್ಮಿಕ ಕಾರ್ಯಗಳನ್ನು ಕೈಗೊಳ್ಳುತ್ತಿರುವುದು ಮಾದರಿಯ ಸೇವೆಯಾಗಿದೆ ಎಂದು ಹೇಳಿದರು.



ಎಸ್.ಡಿ.ಎಂ.ಸಿ ಅಧ್ಯಕ್ಷ ವಿ.ಡಿ. ಸಿದ್ದನಗೌಡ್ರ ಮಾತನಾಡಿ, ಅವ್ವಾ ಪ್ರತಿಷ್ಠಾನದ ಬಳಗವು ಪ್ರತಿವರ್ಷ ಶಾಲಾ ಹಾಗೂ ದೇವಸ್ಥಾನ ಆವರಣ ಸ್ವಚ್ಛತಾ ಕಾರ್ಯ ನಡೆಸುವುದರ ಜೊತೆಗೆ ಮಕ್ಕಳ ಶೈಕ್ಷಣಿಕ ಪ್ರಗತಿಗಾಗಿ ಹತ್ತು ಹಲವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ಕೊಡುಗೆ ನೀಡುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು. ಕಾರ್ಯಕ್ರಮದಲ್ಲಿ ಪ್ರತಿಷ್ಠಾನದ ಸಂಸ್ಥಾಪಕ ಮಂಜುನಾಥ ಮಟ್ಟಿ, ಗುರುಶಾಂತ ಮಟ್ಟಿ, ಪ್ರಕಾಶ ಮದ್ದಿಮ, ಮಾಹಾಂತೇಶ ನಪೂರಿಮಠ, ಪ್ರಭು ಕರಿಗಾರ, ಚಂದ್ರು ಚಳ್ಳಣ್ಣವರ, ಅಶೋಕ ಗಡಾದ, ಫಕ್ಕೀರೇಶ ಬಡಿಗೇರ, ಮಾರುತಿ ಜಾಧವ, ಮುತ್ತಪ್ಪ ಹುಡೆದ, ಅನ್ವರ ನದ್ದಿಮುಲ್ಲಾ, ಶಿವಾನಂದ ನೀರಜಿಡ್ಡಿ ಸೇರಿದಂತೆ ಹಲವರು ಭಾಗವಹಿಸಿದ್ದರು.

**ಸಿದ್ದರಾಮಯ್ಯ ಅಭಿವೃದ್ಧಿ ಕಾರ್ಯ ಶ್ಲಾಘಿಸಿದ ಜಿಲ್ಲಾ ಗ್ಯಾರಂಟಿ ಅಧ್ಯಕ್ಷ ಕುರಿ ಶಿವಮೂರ್ತಿ**


# ಮುಖ್ಯಮಂತ್ರಿ ಯಾರೇ ಆದರೂ ಕಾಂಗ್ರೆಸ್ ಆಡಳಿತ ಶಾಶ್ವತ

■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ರಾಜ್ಯದ ಮುಖ್ಯಮಂತ್ರಿ ಯಾರೇ ಆದರೂ ಕಾಂಗ್ರೆಸ್ ಸರ್ಕಾರ ತನ್ನ ಐದು ವರ್ಷದ ಆಡಳಿತಾವಧಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ತನ್ನದೇ ಆದ ಅಸ್ತಿತ್ವವನ್ನು ಮತ್ತಷ್ಟು ಬಲಪಡಿಸಿಕೊಳ್ಳಲಿದೆ ಎಂದು ವಿಜಯನಗರ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಕುರಿ ಶಿವಮೂರ್ತಿ ಹೇಳಿದರು.

ಕೊಟ್ಟೂರಿನಲ್ಲಿ ಖಾಸಗಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿ ಮಾತನಾಡಿದ ಅವರು, ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಮುಖ್ಯಮಂತ್ರಿ ಆದರೂ ಸಂತೋಷವೇ, ಹಾಗೆಯೇ ಸತೀಶ್ ಜಾರಕಿಹೊಳಿ ಸೇರಿದಂತೆ ಯಾರೇ ಮುಖ್ಯಮಂತ್ರಿ ಆದರೂ ಪಕ್ಷದ ಆಡಳಿತ ಮತ್ತಷ್ಟು ಬಲವಾಗಲಿದೆ ಎಂದು ಅಭಿಪ್ರಾಯಪಟ್ಟರು.

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿಯಾಗಿ ಎಂಟನೇ ವರ್ಷಕ್ಕೆ ಕಾಲಿಡುತ್ತಿರುವ ಸಂದರ್ಭದಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ. ರಾಜ್ಯದ ಜನತೆಗೆ ತಮ್ಮದೇ ಆದ ಪರಿಕಲ್ಪನೆಯ ಗ್ಯಾರಂಟಿ ಯೋಜನೆಗಳನ್ನು ನೀಡಿದ್ದಾರೆ. ಅವರು ಕೈಗೊಂಡಿರುವ ಯೋಜನೆಗಳು ಜನಮಾನಸದಲ್ಲಿ ಅಜರಾಮರವಾಗಿರಲಿವೆ ಎಂದು ಹೇಳಿದರು.



> "ಮುಖ್ಯಮಂತ್ರಿ ಯಾರೇ ಆದರೂ ಕಾಂಗ್ರೆಸ್ ಆಡಳಿತ ಮಾತ್ರ ಐದು ವರ್ಷ ಪೂರ್ಣಗೊಳಿಸಿ ಶಾಶ್ವತ ಅಸ್ತಿತ್ವ ಪಡೆಯಲಿದೆ."
> **– ಕುರಿ ಶಿವಮೂರ್ತಿ, ವಿಜಯನಗರ ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ**

ರಾಜ್ಯದಲ್ಲಿ ಮುಖ್ಯಮಂತ್ರಿ ಹುದ್ದೆ ಕುರಿತ ಚರ್ಚೆಗಳು ನಡೆಯುತ್ತಿರುವ ಹಿನ್ನೆಲೆಯಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಕಾಂಗ್ರೆಸ್ ಪಕ್ಷದ ಆಡಳಿತಕ್ಕೆ ಯಾವುದೇ ಧಕ್ಕೆಯಾಗುವುದಿಲ್ಲ. ಪಕ್ಷದ ನಾಯಕತ್ವದಲ್ಲಿ ಸಮನ್ವಯವಿದ್ದು, ಸರ್ಕಾರ ಸ್ಥಿರವಾಗಿ ಮುಂದುವರಿಯಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ರಾಜ್ಯದಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಕುರಿತು ಪತ್ರಕರ್ತರು ಕೇಳಿದ ಪ್ರಶ್ನೆಗೆ ಉತ್ತರಿಸಿದ ಅವರು, ಸರ್ಕಾರದ ಸೌಲಭ್ಯಗಳು ಹಾಗೂ ಖಾತರಿ ಯೋಜನೆಗಳು ರಾಜ್ಯದ ಎಲ್ಲಾ ವರ್ಗದ ಜನರಿಗೆ ಪ್ರಾಮಾಣಿಕವಾಗಿ ತಲುಪುತ್ತಿವೆ ಎಂದು ಸರ್ಕಾರದ ಕಾರ್ಯವೈಖರಿಯನ್ನು ಸಮರ್ಥಿಸಿಕೊಂಡರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka